ಸಂಪಾದಕರು : ಎ.ಕೆ ಮಲ್ಲಿಕಾರ್ಜುನ ▪ ಸಂಪುಟ : 01 ▪ ಸಂಚಿಕೆ : 34 ▪ ಪುಟ : 04 ▪ ಬೆಲೆ : 02 ▪ 10-07-2026 ▪ ಶುಕ್ರವಾರ ▪ ಬಳ್ಳಾರಿ

ಕನ್ನಡ ದಿನಪತ್ರಿಕೆ

# ಗಣಿನಾಡ ವಾಣಿ

GANINAADA VAANI

E-mail : ganinaadavaani@gmail.com RNI No: KNKAN/26/A0397

ಸುದ್ದಿ ಹಾಗೂ ಆಕರ್ಷಕ ವಿನ್ಯಾಸದ ಜಾಹೀರಾತುಗಳಿಗಾಗಿ ಸಂಪರ್ಕಿಸಿ
9743034347
9900966891

2 ಮತದಾನದ ಹಕ್ಕು ಕಾಪಾಡಿಕೊಳ್ಳಿ : ವೈ. ಶಿವಕುಮಾರ್

3 ಅರಳಹಳ್ಳಿ ತಾಂಡದಲ್ಲಿ ಸಿಸಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಶಂಕುಸ್ಥಾಪನೆ

4 ಅಲ್ಪಸಂಖ್ಯಾತರ ಹಕ್ಕುಗಳ ರಕ್ಷಣೆಗೆ ಆಯೋಗ ಬದ್ಧ : ಯು. ನಿಸಾರ್ ಅಹ್ಮದ್

# ಚುನಾವಣಾ ಪ್ರಕ್ರಿಯೆ ಪಾರದರ್ಶಕತೆಗೆ ದೋಷಮುಕ್ತ ಮತದಾರರ ಪಟ್ಟಿ ಅಗತ್ಯ

## ‘ಎಸ್‌ಐಆರ್’ ವಿಶೇಷ ಜಾಗೃತಿ ಅಭಿಯಾನದಲ್ಲಿ ಜಿಪಂ ಸಿಇಒ ಮಹಮ್ಮದ್ ಹಾರೀಸ್ ಸುಮೇರ್



### ಎಸ್‌ಐಆರ್ ಗಣತಿ ನಮೂನೆ ಭರ್ತಿ ಮಾಡುವ ವಿಧಾನ ತಿಳಿಸಿದ ಜಿಪಂ ಸಿಇಒ

ಕುಟುಂಬದ ಹಿರಿಯರು ಅಥವಾ ಪೋಷಕರು ಕಳೆದ 24–25 ವರ್ಷಗಳ ಹಿಂದೆ (2002ರ ಅವಧಿಯಲ್ಲಿ) ಭಾರತದ ಯಾವುದೇ ಭಾಗದಲ್ಲಿ (ಕರ್ನಾಟಕ, ಆಂಧ್ರಪ್ರದೇಶ, ಮಣಿಪುರ ಸೇರಿದಂತೆ ಯಾವುದೇ ರಾಜ್ಯದಲ್ಲಿ) ಮತ ಚಲಾಯಿಸಿದ್ದರೆ, ಆ ವಿವರಗಳನ್ನು ಈ ಅರ್ಜಿಯ ಎಡಭಾಗದಲ್ಲಿ ಭರ್ತಿ ಮಾಡಬೇಕಾಗುತ್ತದೆ.

ಪ್ರಸ್ತುತ 21 ರಿಂದ 23 ವರ್ಷದೊಳಗಿನ ಯುವಕ–ಯುವತಿಯರು 2002ರ ಅವಧಿಯಲ್ಲಿ ಸಣ್ಣ ಮಕ್ಕಳಾಗಿದ್ದರಿಂದ ಮತ ಚಲಾಯಿಸಿರುವುದಿಲ್ಲ. ಅಂತಹವರು ಅರ್ಜಿಯ ಬಲಭಾಗದಲ್ಲಿ ತಮ್ಮ ಪೋಷಕರ (ತಂದೆ, ತಾಯಿ, ಅಜ್ಜ ಅಥವಾ ಅಜ್ಜಿ) ವಿವರಗಳನ್ನು ಭರ್ತಿ ಮಾಡಿ, ತಮ್ಮ ರಕ್ತ ಸಂಬಂಧಿ ಕುಟುಂಬಸ್ಥರು ಭಾರತದ ಯಾವುದೇ ಭಾಗದಲ್ಲಿ ಮತದಾರರಾಗಿದ್ದರು ಎಂಬುದನ್ನು ಖಚಿತಪಡಿಸಬೇಕು ಎಂದು ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿಕೊಟ್ಟರು.



▪ ಗಣಿನಾಡವಾಣಿ ವಾರ್ತೆ, ಬಳ್ಳಾರಿ

ಚುನಾವಣಾ ಪ್ರಕ್ರಿಯೆಯಲ್ಲಿ ಯಾವುದೇ ಲೋಪದೋಷಗಳಿಲ್ಲದ, ದೋಷಮುಕ್ತ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವುದು ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಅಭಿಯಾನದ ಮುಖ್ಯ ಉದ್ದೇಶವಾಗಿದೆ ಎಂದು ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರೂ ಆದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ನಗರದ ನಂದಿ ಪಿಯು ಕಾಲೇಜು ಸಭಾಂಗಣದಲ್ಲಿ ಗುರುವಾರ ಆಯೋಜಿಸಿದ್ದ ‘ಎಸ್‌ಐಆರ್’ ವಿಶೇಷ ಜಾಗೃತಿ ಅಭಿಯಾನದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಲು ಮತ್ತು ಮುಂಬರುವ ಚುನಾವಣೆಗಳಲ್ಲಿ ಯುವಕರ ಪಾತ್ರವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಚುನಾವಣಾ ಆಯೋಗವು ಕಾಲೇಜು ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಲು ‘ವಿಶೇಷ ಸಮಗ್ರ ಪರಿಷ್ಕರಣೆ’ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಎಸ್‌ಐಆರ್ ಪ್ರಕ್ರಿಯೆಯಲ್ಲಿ ಅರ್ಹತೆ ಪಡೆಯಲಿರುವ ಹೊಸ ಯುವ ಮತದಾರರನ್ನು ಗುರುತಿಸಿ ಪಟ್ಟಿಗೆ ಸೇರಿಸುವುದು. ಹಿಂದೆ ನಡೆದಿರುವಂತೆ ಒಬ್ಬರೇ ವ್ಯಕ್ತಿ ಹಲವು ಬಾರಿ ಮತದಾನ ಮಾಡುವುದು ಅಥವಾ ಮೃತಪಟ್ಟವರ ಹೆಸರಿನಲ್ಲಿ ಮತದಾನವಾಗುವುದನ್ನು ತಡೆಯಲು ಹಳೆಯ ಮತದಾರರ ವಿವರಗಳನ್ನು ಕಟ್ಟುನಿಟ್ಟಾಗಿ ಮರುಪರಿಶೀಲಿಸಲಾಗುತ್ತದೆ ಎಂದರು.

ಸದ್ಯದಲ್ಲೇ ಮತದಾನದ ವಯಸ್ಸನ್ನು ತಲುಪಲಿರುವ ಕಾಲೇಜು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಪ್ರತಿ ಕಾಲೇಜಿನಲ್ಲೂ ‘ಮತದಾರರ ಸಾಕ್ಷರತಾ ಕ್ಲಬ್’ ಅನ್ನು ಸ್ಥಾಪಿಸಲಾಗಿದೆ. ರಾಜಕೀಯ ವಿದ್ಯಮಾನಗಳು ಮತ್ತು ಚುನಾವಣಾ ಪ್ರಕ್ರಿಯೆಗಳಿಂದ ಯುವಕರು ದೂರ ಉಳಿಯಬಾರದು, ಬದಲಿಗೆ ಪ್ರಜಾಪ್ರಭುತ್ವದ ಸಕ್ರಿಯ ಪಾಲುದಾರರಾಗಬೇಕು ಎಂಬುದು ಈ ಕ್ಲಬ್‌ನ ಉದ್ದೇಶವಾಗಿದೆ ಎಂದು ತಿಳಿಸಿದರು.

ವಿದ್ಯಾರ್ಥಿಗಳು ಕೇವಲ ತಾವಷ್ಟೇ ಜಾಗೃತರಾಗುವುದಲ್ಲದೆ, ತಮ್ಮ ಕುಟುಂಬದ ಯಾವುದೇ ಅರ್ಹ ಸದಸ್ಯರ ಹೆಸರು ಸೂಕ್ತ ದಾಖಲೆಗಳ ಕೊರತೆಯಿಂದಾಗಿ ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ನೋಡಿಕೊಳ್ಳುವ ಜವಾಬ್ದಾರಿಯನ್ನೂ ಹೊಂದಬೇಕು ಎಂದು ಅವರು ತಿಳಿಸಿದರು.

**ಜುಲೈ 29 ಕೊನೆಯ ದಿನ:**

ಈ ವಿಶೇಷ ಪರಿಷ್ಕರಣಾ ಪ್ರಕ್ರಿಯೆಯಲ್ಲಿ ಅರ್ಜಿಯನ್ನು ಭರ್ತಿ ಮಾಡಿ ಸಲ್ಲಿಸಲು ಜುಲೈ 29 ಕೊನೆಯ ದಿನವಾಗಿದೆ. ನಿಗದಿತ ಅವಧಿಯೊಳಗೆ ಸಾರ್ವಜನಿಕರು ಅಥವಾ ಅವರ ಪೋಷಕರು ಈ ಫಾರ್ಮ್ ಅನ್ನು ಸಲ್ಲಿಸದಿದ್ದರೆ, ಅವರ ಹೆಸರನ್ನು ಮತದಾರರ ಪಟ್ಟಿಯಿಂದಲೇ ಕೈಬಿಡುವ ಸಾಧ್ಯತೆ ಇರುತ್ತದೆ.

ಹೆಸರು ಪಟ್ಟಿಯಿಂದ ಹೊರಬಿದ್ದರೆ ಮುಂಬರುವ ಚುನಾವಣೆಗಳಲ್ಲಿ ಮತದಾನದ ಹಕ್ಕನ್ನು ಕಳೆದುಕೊಳ್ಳಬೇಕಾಗುತ್ತದೆ ಎಂದು ತಿಳಿಸಿದರು.

ಒಂದು ವೇಳೆ ಬಿಎಲ್‌ಒ ನಿಮ್ಮ ಮನೆಗೆ ಭೇಟಿ ನೀಡದಿದ್ದರೆ, ಅವರಿಗಾಗಿ ಕಾಯುವ ಅಗತ್ಯವಿಲ್ಲ. ಚುನಾವಣಾ ಆಯೋಗದ ಅಧಿಕೃತ ಮೊಬೈಲ್ ಆಪ್ ಆದ ಇಸಿಐ ನೆಟ್ ಅನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್‌ಲೋಡ್ ಮಾಡಿಕೊಂಡು, ಆನ್‌ಲೈನ್ ಮೂಲಕವೇ ಈ ಫಾರ್ಮ್ ಅನ್ನು ಸುಲಭವಾಗಿ ಸಲ್ಲಿಸಬಹುದು ಎಂದು ಹೇಳಿದರು.

ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಶಶಿಕಾಂತ್ ಶಿವಪುರೆ ಅವರು ಮಾತನಾಡಿ, ದೇಶದ ಪ್ರತಿಯೊಬ್ಬ ನಾಗರಿಕನಿಗೂ ಮತದಾನದ ಹಕ್ಕು ಅತ್ಯಂತ ಪವಿತ್ರವಾದದ್ದು.

ಈ ನಿಟ್ಟಿನಲ್ಲಿ ಅರ್ಹ ಮತದಾರರು ತಮ್ಮ ಹೆಸರನ್ನು ಮತದಾರರ ಪಟ್ಟಿಗೆ ಸೇರಿಸಲು ಜುಲೈ 29 ರಿಂದ ಫಾರ್ಮ್ ನಂಬರ್ 6 ವಿತರಣೆ ಆರಂಭವಾಗಲಿದ್ದು, ಸಾರ್ವಜನಿಕರು ಇದನ್ನು ಪಡೆದು ತಮ್ಮ ಹೆಸರನ್ನು ಮತದಾರರ ಪಟ್ಟಿಯಲ್ಲಿ ನೋಂದಾಯಿಸಿಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ಭಾರತೀಯ ನಾಗರಿಕರಾಗಿ ನಮ್ಮ ಹಕ್ಕನ್ನು ಚಲಾಯಿಸಲು ಮತದಾರರ ಗುರುತಿನ ಚೀಟಿ ಅತ್ಯಗತ್ಯ. ಹಾಗಾಗಿ ಯಾವುದೇ ಕಾರಣಕ್ಕೂ ನಿಮ್ಮ ಕುಟುಂಬದ ಅರ್ಹ ಸದಸ್ಯರ ಹೆಸರುಗಳು ಮತದಾರರ ಪಟ್ಟಿಯಿಂದ ಕೈಬಿಟ್ಟು ಹೋಗದಂತೆ ಎಚ್ಚರ ವಹಿಸಿ, ಜುಲೈ 29 ರಿಂದ ಆರಂಭವಾಗುವ ಈ ಪ್ರಕ್ರಿಯೆಯ ಸದುಪಯೋಗ ಪಡೆದುಕೊಳ್ಳಿ ಎಂದು ಮನವಿ ಮಾಡಿದರು.

ಜಿಲ್ಲಾ ಮಟ್ಟದ ಮಾಸ್ಟರ್ ತರಬೇತುದಾರರಾದ ಶಿವಲಿಂಗ ರೆಡ್ಡಿ ಹಾಗೂ ಅಕ್ಕಿ ಮಲ್ಲಿಕಾರ್ಜುನ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ ಎಸ್‌ಐಆರ್ ಪ್ರಕ್ರಿಯೆ ಕುರಿತು ಸವಿವರವಾದ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಹನುಮಂತರಾವ್, ನೋಡಲ್ ಅಧಿಕಾರಿ ಕೆ.ನಾಗೀರೆಡ್ಡಿ, ನಂದಿ ಪಿಯು ಕಾಲೇಜಿನ ಪ್ರಾಂಶುಪಾಲರುಗಳಾದ ಜಗದೀಶ್ ಬಾಬು, ಅನಿತಾ ಸೇರಿದಂತೆ ಕಾಲೇಜಿನ ಬೋಧಕ–ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

---

### ಥೈಲೆಂಡ್ ಗ್ಲೋಬಲ್ ಯೋಗ ಫೆಸ್ಟಿವಲ್-2026

# ಬಳ್ಳಾರಿ ಜಿಲ್ಲೆಯ ಯೋಗ ಶಿಕ್ಷಕ ಎ. ರಾಘವೇಂದ್ರಗೆ 'ಯೋಗ ವಾಹಕ' ಪ್ರಶಸ್ತಿ



▪ ಗಣಿನಾಡವಾಣಿ ವಾರ್ತೆ, ಬಳ್ಳಾರಿ

ಭಾರತ–ಥೈಲೆಂಡ್ ಸಾಂಸ್ಕೃತಿಕ ಬಾಂಧವ್ಯವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಥೈಲೆಂಡ್‌ನಲ್ಲಿ ಆಯೋಜಿಸಲಾದ ಭಾರತ–ಥೈಲೆಂಡ್ ಗ್ಲೋಬಲ್ ಯೋಗ ಫೆಸ್ಟಿವಲ್–2026ರಲ್ಲಿ ಬಳ್ಳಾರಿ ಜಿಲ್ಲೆಯ ಸಂಡೂರು ತಾಲ್ಲೂಕಿನ ಕುರೇಕುಪ್ಪ ಗ್ರಾಮದ ಯೋಗ ಶಿಕ್ಷಕ ಹಾಗೂ ವಿಶ್ವ ಯೋಗಿ ಪುರಸ್ಕೃತ, ಎಸ್‌ಆರ್‌ಕೆ ಯೋಗ ಕೇಂದ್ರದ ಎ. ರಾಘವೇಂದ್ರ ಅವರಿಗೆ ಪ್ರತಿಷ್ಠಿತ 'ಯೋಗ ವಾಹಕ' ಪ್ರಶಸ್ತಿ ಪ್ರದಾನ ಮಾಡಲಾಯಿತು.

ಇಂಡಿಯಾ–ಥೈ ಚೇಂಬರ್ ಆಫ್ ಕಾಮರ್ಸ್, ಥೈಲೆಂಡ್, ಗ್ಲೋಬಲ್ ಯೋಗ ಟೀಮ್ ಬೆಂಗಳೂರು, ಡಾ. ದೇವರಾಜ್ ಗುರುಜಿ, ಯೋಗಾಚಾರ್ಯ ಎಸ್.ಎಸ್. ಹಿರೇಮಠ ಗುರುಜಿ ಹಾಗೂ ಗದಗದ ಶಿವಾನಂದ ಯೋಗ ಕಾಲೇಜಿನ ಸಹಯೋಗದಲ್ಲಿ ಈ ಅಂತರರಾಷ್ಟ್ರೀಯ ಯೋಗ ಮಹೋತ್ಸವವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಥೈಲೆಂಡ್‌ನ ಖ್ಯಾತ ನಟಿ ಮಿಸ್ ಒನಾಸಸಿಪಾಟ್ ಮಾಮೀಕೆಟ್ರಾಟ್ (Miss Onasasipat Mameeketrat) ಅವರು ಎ. ರಾಘವೇಂದ್ರ ಅವರಿಗೆ 'ಯೋಗ ವಾಹಕ' ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಿದರು.

ಪ್ರಶಸ್ತಿ ಸ್ವೀಕರಿಸಿದ ಎ. ರಾಘವೇಂದ್ರ ಅವರು, ಈ ಗೌರವ ದೊರಕಲು ಯೋಗಾಚಾರ್ಯ ಎಸ್.ಎಸ್. ಹಿರೇಮಠ ಗುರುಜಿ, ಕೆ. ರಮೇಶ್ ಗುರುಜಿ, ಕೆ. ಚಂಬರರಾವ್, ಹರಗಿನದೋಣಿ ಸರ್ಕಾರಿ ಶಾಲೆಯ ಶಿಕ್ಷಕಿ ವನಜಾಕ್ಷಿ, ಯೋಗ ಶಿಕ್ಷಕಿ ಸೌಮ್ಯ ಹಾಗೂ ಎಸ್‌ಆರ್‌ಕೆ ಯೋಗ ಕೇಂದ್ರದ ಎಲ್ಲಾ ಯೋಗ ಶಿಕ್ಷಕರು, ವಿದ್ಯಾರ್ಥಿಗಳು ಮತ್ತು ಮಕ್ಕಳ ಪ್ರೋತ್ಸಾಹ, ಸಹಕಾರ ಹಾಗೂ ಆಶೀರ್ವಾದ ಕಾರಣವಾಗಿದೆ ಎಂದು ಕೃತಜ್ಞತೆ ಸಲ್ಲಿಸಿದರು.

ಇದೇ ಸಂದರ್ಭದಲ್ಲಿ ಗದಗದ ಯೋಗಾಚಾರ್ಯ ಎಸ್.ಎಸ್. ಹಿರೇಮಠ ಗುರುಜಿ, ಸುನೀಲ್ ಹಿರೇಮಠ, ಬೆಳಗಾವಿಯ ಸಂಗಮೇಶ್, ದಾವಣಗೆರೆಯ ಗಂಗಾಂಬಿಕಾ ಹಾಗೂ ಕೊಪ್ಪಳ ಜಿಲ್ಲೆಯ ಮರಿಸ್ವಾಮಿ ಕೆ. ಅವರಿಗೂ 'ಯೋಗ ವಾಹಕ' ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಡಾ. ದೇವರಾಜ್ ಗುರುಜಿ ಹಾಗೂ ಯೋಗಾಚಾರ್ಯ ಎಸ್.ಎಸ್. ಹಿರೇಮಠ ಗುರುಜಿ, "Local to Global - Global to Local" ಪರಿಕಲ್ಪನೆಯಡಿ ಯೋಗವನ್ನು ಪ್ರತಿಯೊಂದು ಹಳ್ಳಿ, ಪಟ್ಟಣ ಹಾಗೂ ನಗರದಿಂದ ವಿಶ್ವದಾದ್ಯಂತ ತಲುಪಿಸುವ ಸಂಕಲ್ಪ ಹೊಂದಿದ್ದು, ಇಂತಹ ಅಂತರರಾಷ್ಟ್ರೀಯ ಯೋಗ ಉತ್ಸವಗಳ ಮೂಲಕ ಕರ್ನಾಟಕ ಹಾಗೂ ಭಾರತದ ಗ್ರಾಮೀಣ ಭಾಗಗಳ ಯೋಗ ಪ್ರತಿಭೆಗಳನ್ನು ಜಾಗತಿಕ ವೇದಿಕೆಗೆ ಪರಿಚಯಿಸಲಾಗುವುದು ಎಂದು ತಿಳಿಸಿದರು.

ಯೋಗ ಮಹೋತ್ಸವದಲ್ಲಿ ಥೈಲೆಂಡ್‌ನ ಯೋಗ ವಿದ್ಯಾರ್ಥಿಗಳು ವಿವಿಧ ಯೋಗಾಸನಗಳು, ಪ್ರಾಣಾಯಾಮ ಹಾಗೂ ಸಮೂಹ ಯೋಗ ಪ್ರದರ್ಶನ ನೀಡಿ ಮೆಚ್ಚುಗೆ ಗಳಿಸಿದರು.

ಭಾರತ ಮತ್ತು ಥೈಲೆಂಡ್ ನಡುವಿನ ಯೋಗ, ಸಂಸ್ಕೃತಿ, ಆರೋಗ್ಯ ಹಾಗೂ ಸ್ನೇಹ ಬಾಂಧವ್ಯವನ್ನು ಮತ್ತಷ್ಟು ಗಟ್ಟಿಗೊಳಿಸುವಲ್ಲಿ ಈ ಅಂತರರಾಷ್ಟ್ರೀಯ ಯೋಗ ಉತ್ಸವ ಮಹತ್ವದ ಹೆಜ್ಜೆಯಾಗಿದ್ದು, "ಯೋಗದಿಂದ ವಿಶ್ವಶಾಂತಿ – ಯೋಗದಿಂದ ವಿಶ್ವಬಂಧುತ್ವ" ಎಂಬ ಸಂದೇಶವನ್ನು ವಿಶ್ವದಾದ್ಯಂತ ಸಾರುವಲ್ಲಿ ಯಶಸ್ವಿಯಾಯಿತು.

---

# ಎಪಿಎಂಸಿ ಯಾರ್ಡ್ ಜೋಡಿ ಕೊಲೆ ಪ್ರಕರಣ ಭೇದಿಸಿದ ಬಳ್ಳಾರಿ ಪೊಲೀಸರು : ಮೂವರು ಆರೋಪಿಗಳ ಬಂಧನ

▪ ಗಣಿನಾಡವಾಣಿ ವಾರ್ತೆ, ಬಳ್ಳಾರಿ









ನಗರದ ಎಪಿಎಂಸಿ ಯಾರ್ಡ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಜುಲೈ 7ರಂದು ನಡೆದಿದ್ದ ಜೋಡಿ ಕೊಲೆ ಪ್ರಕರಣವನ್ನು ಬಳ್ಳಾರಿ ಜಿಲ್ಲಾ ಪೊಲೀಸರು ಯಶಸ್ವಿಯಾಗಿ ಭೇದಿಸಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರು ಆರೋಪಿಗಳನ್ನು ಬಂಧಿಸಿದ್ದಾರೆ.

ಜುಲೈ 7ರಂದು ರಾತ್ರಿ ನಗರದ ಗುಗ್ಗರಹಟ್ಟಿ ಪ್ರದೇಶದಲ್ಲಿ ನಾಗಲಕ್ಷ್ಮ (24) ಹಾಗೂ ಶ್ರೀನಿವಾಸ ಅಲಿಯಾಸ್ ವೆಂಕಟೇಶ್ (47) ಅವರನ್ನು ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿ ಹತ್ಯೆ ಮಾಡಲಾಗಿತ್ತು.

ಈ ಕುರಿತು ಎಪಿಎಂಸಿ ಯಾರ್ಡ್ ಪೊಲೀಸ್ ಠಾಣೆಯಲ್ಲಿ ಅಪರಾಧ ಸಂಖ್ಯೆ 137/2026ರಡಿ ಭಾರತೀಯ ನ್ಯಾಯ ಸಂಹಿತೆ (ಬಿಎನ್‌ಎಸ್) ಕಲಂ 103(1), 109 ಹಾಗೂ 3(5)ರ ಅಡಿಯಲ್ಲಿ ಪ್ರಕರಣ ದಾಖಲಿಸಿ ತನಿಖೆ ಕೈಗೊಳ್ಳಲಾಗಿತ್ತು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಸುಮನ ಡಿ. ಪನ್ನೇಕರ್ ಅವರ ಮಾರ್ಗದರ್ಶನದಲ್ಲಿ ವಿಶೇಷ ತನಿಖಾ ತಂಡ ರಚಿಸಿ ಕಾರ್ಯಾಚರಣೆ ನಡೆಸಿದ ಪೊಲೀಸರು, ಪ್ರಕರಣದಲ್ಲಿ ಭಾಗಿಯಾಗಿದ್ದ ತೇಜ (29), ವೆಂಕಟೇಶ್ (27) ಹಾಗೂ ಗುರುಶಂಕರ (50) ಎಂಬ ಮೂವರು ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಪೊಲೀಸರ ಪ್ರಾಥಮಿಕ ತನಿಖೆಯ ಪ್ರಕಾರ, ಮೃತ ಶ್ರೀನಿವಾಸ ಹಾಗೂ ನಾಗಲಕ್ಷ್ಮ ಅವರ ಶೀಲದ ಬಗ್ಗೆ ಅನುಮಾನ ವ್ಯಕ್ತಪಡಿಸಿದ್ದ ಆರೋಪಿಗಳು ಅವರನ್ನು ಮನೆಗೆ ಕರೆಸಿಕೊಂಡು ಮಾತಿನ ಚಕಮಕಿ ನಡೆಸಿದ್ದಾರೆ.

ಬಳಿಕ ವಾಗ್ವಾದ ತೀವ್ರಗೊಂಡು ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿ ಕೊಲೆ ಮಾಡಿರುವುದಾಗಿ ವಿಚಾರಣೆ ವೇಳೆ ತಿಳಿದುಬಂದಿದೆ.

ಅಲ್ಲದೆ, ಆರೋಪಿ ತೇಜ ಹಾಗೂ ಮೃತ ಶ್ರೀನಿವಾಸ ನಡುವೆ ಹಿಂದಿನಿಂದಲೂ ವೈಷಮ್ಯವಿದ್ದು, ಅದೇ ದ್ವೇಷವೂ ಕೊಲೆಗೆ ಕಾರಣವಾಗಿರುವುದು ತನಿಖೆಯಿಂದ ಬೆಳಕಿಗೆ ಬಂದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಗಳಿಂದ ಕೊಲೆ ಕೃತ್ಯಕ್ಕೆ ಬಳಸಿದ್ದ ಮಾರಕಾಸ್ತ್ರ ಸೇರಿದಂತೆ ಇತರೆ ವಸ್ತುಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಸಂಗ್ರಹಿಸಲಾದ ಸಾಕ್ಷ್ಯಾಧಾರಗಳ ಆಧಾರದ ಮೇಲೆ ಆರೋಪಿಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದ್ದು, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಪ್ರಕರಣದ ತನಿಖೆಯನ್ನು ಎಪಿಎಂಸಿ ಯಾರ್ಡ್ ಪೊಲೀಸ್ ಠಾಣೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಸಮರ್ಪಕವಾಗಿ ನಡೆಸಿದ್ದು, ಅಲ್ಪಾವಧಿಯಲ್ಲೇ ಜೋಡಿ ಕೊಲೆ ಪ್ರಕರಣವನ್ನು ಭೇದಿಸಿರುವ ತನಿಖಾ ತಂಡದ ಕಾರ್ಯವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಸುಮನ ಡಿ. ಪನ್ನೇಕರ್ ಅವರು ಶ್ಲಾಘಿಸಿ ಅಭಿನಂದಿಸಿದ್ದಾರೆ. ಪ್ರಕರಣದ ಕುರಿತು ಹೆಚ್ಚಿನ ತನಿಖೆ ಮುಂದುವರಿದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

---

# ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರ : 2,03,410 ಎಸ್‌ಐಆರ್ ಗಣತಿ ನಮೂನೆ ವಿತರಣೆ

▪ ಗಣಿನಾಡವಾಣಿ ವಾರ್ತೆ, ಬಳ್ಳಾರಿ

94–ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯು ನಡೆಯುತ್ತಿದ್ದು, ಮತದಾರರಿಗೆ ಗಣತಿ ಅರ್ಜಿಗಳನ್ನು ವಿತರಿಸಲು ಬಿ.ಎಲ್.ಓ ಗಳ ಮೂಲಕ ಮನೆ ಮನೆ ಭೇಟಿ ನೀಡುತ್ತಿದ್ದಾರೆ. ಒಟ್ಟು 2,79,144 ಮತದಾರರಿದ್ದು, ಬುಧವಾರಕ್ಕೆ 2,03,410 (ಶೇ. 72.87) ಎಸ್‌ಐಆರ್ ಗಣತಿ ನಮೂನೆಗಳನ್ನು ವಿತರಿಸಲಾಗಿದೆ.

ಈ ಮನೆ ಮನೆ ಗಣತಿ ಹಾಗೂ ಡಿಜಿಟಲೀಕರಣ ಪ್ರಕ್ರಿಯೆಯು ಜುಲೈ 29 ರವರೆಗೆ ನಡೆಯಲಿದೆ. ಈಗಾಗಲೇ ಶೇ.98.01 ರಷ್ಟು ಮತದಾರರನ್ನು ಮ್ಯಾಪ್ ಮಾಡಲಾಗಿದೆ. 15,033 (ಶೇ. 5.39) ಅರ್ಜಿಗಳು ಡಿಜಿಟಲೀಕರಣಗೊಂಡಿವೆ. 664 ಅರ್ಜಿಗಳು ಆನ್‌ಲೈನ್ ಮೂಲಕ ಸಲ್ಲಿಕೆಯಾಗಿವೆ.

431– ಮರಣ ಹೊಂದಿದವರು, 203 –ಶಾಶ್ವತವಾಗಿ ವಲಸೆ ಹೋದವರು, 28– ಈಗಾಗಲೇ ದಾಖಲಾಗಿರುವ ಮತದಾರರು, 02– ಗೈರುಹಾಜರಿ ಹಾಗೂ 10–ಇತರ ಪ್ರಕರಣಗಳು (10) ಸೇರಿವೆ ಎಂದು ಬಳ್ಳಾರಿ ನಗರ ಕ್ಷೇತ್ರದ ಮತದಾರರ ನೋಂದಣಾಧಿಕಾರಿಯೂ ಆದ ಮಹಾನಗರ ಪಾಲಿಕೆ ಆಯುಕ್ತ ಪಿ. ಎಸ್. ಮಂಜುನಾಥ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

# ಜು.11 ರಂದು ರಾಷ್ಟ್ರೀಯ ಲೋಕ್ ಅದಾಲತ್

▪ ಗಣಿನಾಡವಾಣಿ ವಾರ್ತೆ, ಬಳ್ಳಾರಿ

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಇವರ ನಿರ್ದೇಶನದಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವತಿಯಿಂದ ಜುಲೈ 11 ರಂದು ಬೆಳಿಗ್ಗೆ 10 ಗಂಟೆಗೆ ನಗರದ ತಾಳೂರು ರಸ್ತೆಯ ಹೊಸ ಜಿಲ್ಲಾ ನ್ಯಾಯಾಲಯ ಸಂಕೀರ್ಣದಲ್ಲಿ ರಾಷ್ಟ್ರೀಯ ಲೋಕ್ ಅದಾಲತ್ ನಡೆಯಲಿದೆ.

ಸಾರ್ವಜನಿಕರು ತಮ್ಮ ವ್ಯಾಜ್ಯಪೂರ್ವ, ರಾಜಿಯಾಗಬಹುದಾದ ಅಪರಾಧಿಕ ಪ್ರಕರಣಗಳು, ಚೆಕ್ ಪ್ರಕರಣಗಳು, ಬ್ಯಾಂಕ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪರಿಹಾರ ನ್ಯಾಯಾಧೀಕರಣದ ಪ್ರಕರಣಗಳು, ವೈವಾಹಿಕ ಹಾಗೂ ಕೌಟುಂಬಿಕ ಪ್ರಕರಣಗಳು, ಸಿವಿಲ್ ಪ್ರಕರಣಗಳು ಹಾಗೂ ಇತರೆ ರಾಜಿಯಾಗಬಹುದಾದ ಪ್ರಕರಣಗಳನ್ನು ಜಿಲ್ಲಾ ನ್ಯಾಯಾಲಯದಲ್ಲಿ ನಡೆಯುವ ರಾಷ್ಟ್ರೀಯ ಲೋಕ್ ಅದಾಲತ್ ಮೂಲಕ ಶೀಘ್ರವೇ ಇತ್ಯರ್ಥಗೊಳಿಸಿ ಪರಿಹಾರ ಪಡೆದುಕೊಳ್ಳಲು ಸುವರ್ಣ ಅವಕಾಶ ಕಲ್ಪಿಸಿದ್ದು, ಸಾರ್ವಜನಿಕರು, ಕಕ್ಷಿದಾರರು ಇದರ ಪ್ರಯೋಜನ ಪಡೆದುಕೊಳ್ಳುವುದರ ಮೂಲಕ ತಮ್ಮ ವಿವಾದಗಳನ್ನು ಅಂತ್ಯಗೊಳಿಸಿಕೊಳ್ಳಬಹುದಾಗಿದೆ.

ಪುಟ–2

## ಅವಘಡದಲ್ಲಿ ಖಾಸಗಿ ಕಾರ್ಮಿಕ ಸಾವು



■ ಗಣಿನಾಡವಾಣಿ ವಾರ್ತೆ, ಬಳ್ಳಾರಿ

ನಗರದ ಸಂಗನಕಲ್ಲು ಗುಡ್ಡ ಸಮೀಪದ ಧ್ಯಾನ ಕೇಂದ್ರದ ಬಳಿ ಬುಧವಾರ ನಡೆದ ವಿದ್ಯುತ್ ಅವಘಡದಲ್ಲಿ ಖಾಸಗಿ ಕಾರ್ಮಿಕನೊಬ್ಬ ಮೃತಪಟ್ಟಿರುವ ದುರ್ಘಟನೆ ನಡೆದಿದೆ.

ಮೃತರನ್ನು ಯರಗುಡಿ ಗ್ರಾಮದ ಹುಲಗಪ್ಪ (22) ಎಂದು ಗುರುತಿಸಲಾಗಿದೆ. ಜೆಸ್ಕಾಂ ವ್ಯಾಪ್ತಿಯಲ್ಲಿ ವಿದ್ಯುತ್ ಲೈನ್‌ಗೆ ಲಿಂಕ್ ಕಾಮಗಾರಿ ನಡೆಯುತ್ತಿದ್ದ ವೇಳೆ ಈ ಅವಘಡ ಸಂಭವಿಸಿದೆ ಎಂದು ತಿಳಿದುಬಂದಿದೆ.

ವಿದ್ಯುತ್ ಕಂಬದ ಮೇಲೆ ಕೆಲಸ ನಿರ್ವಹಿಸುತ್ತಿದ್ದ ವೇಳೆ ಹುಲಗಪ್ಪ ಅವರಿಗೆ ವಿದ್ಯುತ್ ಸ್ಪರ್ಶಗೊಂಡು ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಜಿಲ್ಲಾಸ್ಪತ್ರೆಗೆ ರವಾನಿಸಲಾಗಿದೆ.

ಕೆಲಸವನ್ನು ಯಾವ ಆದೇಶದಡಿ ಕೈಗೊಳ್ಳಲಾಗಿತ್ತು, ಅಗತ್ಯ ಸುರಕ್ಷತಾ ನಿಯಮಗಳನ್ನು ಪಾಲಿಸಲಾಗಿತ್ತೇ, ಕಾರ್ಮಿಕರಿಗೆ ಸುರಕ್ಷತಾ ಉಪಕರಣಗಳನ್ನು ಒದಗಿಸಲಾಗಿತ್ತೇ ಎಂಬ ಕುರಿತು ಸಮಗ್ರ ತನಿಖೆ ನಡೆಸಬೇಕೆಂದು ಸ್ಥಳೀಯರು ಆಗ್ರಹಿಸಿದ್ದಾರೆ.

ಮೃತ ಹುಲಗಪ್ಪ ಅವರ ಕುಟುಂಬಕ್ಕೆ ಸೂಕ್ತ ಪರಿಹಾರ ಹಾಗೂ ನ್ಯಾಯ ಒದಗಿಸಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದು, ಘಟನೆಗೆ ಕಾರಣರಾದವರ ವಿರುದ್ಧ ಕ್ರಮ ಕೈಗೊಂಡು ಇಂತಹ ದುರ್ಘಟನೆಗಳು ಮರುಕಳಿಸದಂತೆ ಅಗತ್ಯ ಮುನ್ನೆಚ್ಚರಿಕೆ ವಹಿಸಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಮಾಡಿದ್ದಾರೆ.

## ಜು.11 ರಂದು ರಾಷ್ಟ್ರೀಯ ಲೋಕ್ ಅದಾಲತ್

■ ಮೊದಲ ಪುಟದಿಂದ

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಥವಾ ದೂ.08392-278077 ಸಹಾಯವಾಣಿ ಗೆ ಕರೆ ಮಾಡಿ ಮಾಹಿತಿ ಪಡೆಯಬಹುದು.

ಸಾರ್ವಜನಿಕರು ಹಾಗೂ ಕಕ್ಷಿದಾರರು ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಸಿದ್ಧಲಿಂಗ ಪ್ರಭು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯಾರ್ಥಿವೇತನಕ್ಕೆ ಆನ್‌ಲೈನ್ ಅರ್ಜಿ ಆಹ್ವಾನ

■ ಗಣಿನಾಡವಾಣಿ ವಾರ್ತೆ, ಬಳ್ಳಾರಿ

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ 2026-27ನೇ ಸಾಲಿನ ಎಸ್‌ಎಸ್‌ಪಿ ಪೋರ್ಟಲ್ ನಲ್ಲಿ 1 ರಿಂದ 8ನೇ ತರಗತಿಯ ಮೆಟ್ರಿಕ್ ಪೂರ್ವ ಹಾಗೂ ಶುಲ್ಕ ಮರುಪಾವತಿ ಯೋಜನೆಯಡಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಹಾಗೂ ಪಾರ್ಸಿ ಧರ್ಮದ ಅರ್ಹ ವಿದ್ಯಾರ್ಥಿಗಳು ಈ ಸೌಲಭ್ಯವನ್ನು ಪಡೆದುಕೊಳ್ಳಬಹುದಾಗಿದೆ. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 30 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ವಿವರಗಳಿಗಾಗಿ ವಿದ್ಯಾರ್ಥಿಗಳು ಹಾಗೂ ಪೋಷಕರು 'ಜಿಲ್ಲಾ ಅಧಿಕಾರಿಗಳ ಕಚೇರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಮೌಲಾನ ಆಜಾದ್ ಭವನ, ಜೋಳದರಾಶಿ ದೊಡ್ಡನಗೌಡ ರಂಗಮಂದಿರ ಹತ್ತಿರ, ಬಳ್ಳಾರಿ' ಇಲ್ಲಿಗೆ ನೇರವಾಗಿ ಭೇಟಿ ನೀಡಬಹುದು.

**ಸಹಾಯವಾಣಿ ಸಂಖ್ಯೆ:** ಬಳ್ಳಾರಿ ಜಿಲ್ಲಾ/ತಾಲ್ಲೂಕು ಮಾಹಿತಿ ಕೇಂದ್ರ: 08392-200125 / 224 ಮತ್ತು 8310321101

ಸಿರುಗುಪ್ಪ ತಾಲ್ಲೂಕು: 9148889975,ಸಂಡೂರು ತಾಲ್ಲೂಕು: 9036925966 ಅರ್ಹ ವಿದ್ಯಾರ್ಥಿಗಳು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗಾಗಿ ಅರ್ಜಿಯನ್ನು ಸಲ್ಲಿಸುವಂತೆ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ರಾಜು ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಜಿಲ್ಲೆಯಲ್ಲಿ ಶೇ.99.19 ರಷ್ಟು ಗಣತಿ ನಮೂನೆಗಳ ವಿತರಣೆ

■ ಗಣಿನಾಡವಾಣಿ ವಾರ್ತೆ, ವಿಜಯನಗರ

ವಿಜಯನಗರ ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಚುರುಕಿನಿಂದ ಸಾಗುತ್ತಿದ್ದು, ಜಿಲ್ಲೆಯಾದ್ಯಂತ ಈವರೆಗೆ ಒಟ್ಟು 11,42,732 ಇ ಫಾರ್ಮ್ ನಮೂನೆಗಳ ವಿತರಣೆ ಪೈಕಿ ಈಗಾಗಲೇ 11,33,432 (ಶೇ.99.19) ಫಾರ್ಮ್ ಗಳನ್ನು ವಿತರಿಸಲಾಗಿದ್ದು, ಇನ್ನು 9300 ಫಾರ್ಮ್ ಗಳು ಮಾತ್ರ ವಿತರಣೆಗೆ ಬಾಕಿ ಉಳಿದಿವೆ.

ಮತಗಟ್ಟೆ ಮಟ್ಟದ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ಗಣತಿ ನಮೂನೆಗಳನ್ನು ವಿತರಿಸುತ್ತಿದ್ದಾರೆ. ಪ್ರಸ್ತುತ ಜಿಲ್ಲೆಯ ಮತದಾರರ ಪಟ್ಟಿಯಲ್ಲಿ ಒಟ್ಟು 11,42,732 ಮತದಾರರಿದ್ದು, ಈಗಾಗಲೇ ಶೇ. 94 ರಷ್ಟು ಮತದಾರರ ಮ್ಯಾಪಿಂಗ್ ಕಾರ್ಯ ಪೂರ್ಣಗೊಂಡಿದೆ. ಜೂನ್ 30 ರಿಂದ ಅಭಿಯಾನ ಪ್ರಾರಂಭವಾಗಿದ್ದು, ಜುಲೈ 29 ರವರೆಗೆ ಮನೆ ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸುವ ಹಾಗೂ ಡಿಜಿಟಲೀಕರಣ ಪ್ರಕ್ರಿಯೆ ನಡೆಯಲಿದೆ. ವಿತರಿಸಲಾದ ಗಣತಿ ನಮೂನೆಗಳ ಪೈಕಿ ಒಟ್ಟು 1,78,752 (ಶೇ 15.63) ನಮೂನೆಗಳನ್ನು ಈಗಾಗಲೇ ಡಿಜಿಟಲೀಕರಣಗೊಳಿಸಲಾಗಿದೆ. ಇದಲ್ಲದೆ, 932 ಮತದಾರರು ಸ್ವತಃ ಆನ್‌ಲೈನ್ ಮೂಲಕ ನಮೂನೆಗಳನ್ನು ಸಲ್ಲಿಸಿದ್ದಾರೆ.

ಬಿಎಲ್‌ಒಗಳ ಪರಿಶೀಲನೆ ವೇಳೆ ಜಿಲ್ಲೆಯಲ್ಲಿ 1583 ಮೃತ ಮತದಾರರು ಹಾಗೂ ಖಾಯಂ ಆಗಿ ಸ್ಥಳಾಂತರಗೊಂಡಿರುವ 1000 ಮತದಾರರರನ್ನು ಗುರುತಿಸಲಾಗಿದೆ. ಅದಷ್ಟೇ ಅಲ್ಲದೇ ಈಗಾಗಲೇ 400 ದಾಖಲಾಗಿರುವವರು ಹಾಗೂ 14 ಜನ ಸಂಪರ್ಕಕ್ಕೆ ಸಿಗದ ಅಥವಾ ಅಲಭ್ಯವಿರುವ ಮತದಾರರನ್ನು ಗುರುತಿಸಿ ಪತ್ತೆ ಹಚ್ಚಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ ತಿಳಿಸಿದ್ದಾರೆ.

# ಮತದಾನದ ಹಕ್ಕು ಕಾಪಾಡಿಕೊಳ್ಳಿ : ವೈ. ಶಿವಕುಮಾರ್

### ಅಲೆಮಾರಿ ಸಮುದಾಯದಲ್ಲಿ ಎಸ್‌ಐಆರ್ ಜಾಗೃತಿ

■ ಗಣಿನಾಡವಾಣಿ ವಾರ್ತೆ, ಸಿರುಗುಪ್ಪ

ಮತದಾರರ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿ ಅಲೆಮಾರಿ ಸಮುದಾಯದ ಪ್ರತಿಯೊಬ್ಬರೂ ಭಾಗವಹಿಸಿ ತಮ್ಮ ಮತದಾನದ ಹಕ್ಕನ್ನು ಖಚಿತಪಡಿಸಿಕೊಳ್ಳಬೇಕು ಎಂದು ಕೆಪಿಸಿಸಿ ಸಾಮಾಜಿಕ ನ್ಯಾಯ ಸಮಿತಿ ರಾಜ್ಯ ಉಪಾಧ್ಯಕ್ಷ ವೈ. ಶಿವಕುಮಾರ್ ಕರೆ ನೀಡಿದರು.

ಸಿರುಗುಪ್ಪ ತಾಲೂಕಿನ ಸಿರಿಗೇರಿ ಕ್ರಾಸ್ ಸಮೀಪದ ಅಲೆಮಾರಿ ಕಾಲೋನಿಗೆ ಭೇಟಿ ನೀಡಿ ಮನೆ ಮನೆಗೆ ತೆರಳಿ ಅವರು ಎಸ್‌ಐಆರ್ ಕುರಿತು ಜಾಗೃತಿ ಮೂಡಿಸಿದರು.

ಎಸ್‌ಐಆರ್ ಫಾರ್ಮ್ ಅನ್ನು ಹೇಗೆ ಭರ್ತಿ ಮಾಡಬೇಕು, ಬಿಎಲ್‌ಒ (Booth Level Officer) ಅಧಿಕಾರಿಗಳು ಮನೆಗಳಿಗೆ ಬಂದಾಗ ಯಾವ ರೀತಿಯ ಮಾಹಿತಿ ಮತ್ತು ದಾಖಲೆಗಳನ್ನು ನೀಡಬೇಕು ಎಂಬುದರ ಕುರಿತು ನಿವಾಸಿಗಳಿಗೆ ವಿವರವಾಗಿ ತಿಳಿಸಿದರು.

ಯಾವುದೇ ಅಲೆಮಾರಿ ಕುಟುಂಬ ಮತದಾರರ ಪಟ್ಟಿಯಿಂದ ಹೊರಗುಳಿಯಬಾರದು.

ಪ್ರತಿಯೊಬ್ಬ ಅರ್ಹ ನಾಗರಿಕರೂ ತಮ್ಮ ಮತದಾನದ ಹಕ್ಕನ್ನು ಉಳಿಸಿಕೊಳ್ಳುವುದು



ಪ್ರಜಾಪ್ರಭುತ್ವದ ಬಲವರ್ಧನೆಗೆ ಅಗತ್ಯವಾಗಿದೆ ಎಂದು ಅವರು ಹೇಳಿದರು.

ಅಲೆಮಾರಿ ಸಮುದಾಯವು ಸಮಾಜದ ಮುಖ್ಯವಾಹಿನಿಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕಿದ್ದು, ಯಾವುದೇ ಕಾರಣಕ್ಕೂ ಮತದಾನದ ಹಕ್ಕಿನಿಂದ ವಂಚಿತರಾಗಬಾರದು. ಬಿಎಲ್‌ಒ ಅಧಿಕಾರಿಗಳಿಗೆ ನಿಖರ ಮಾಹಿತಿ ನೀಡಿ ಎಸ್‌ಐಆರ್ ಪ್ರಕ್ರಿಯೆಗೆ ಸಂಪೂರ್ಣ ಸಹಕಾರ ನೀಡುವಂತೆ ಅವರು ಮನವಿ ಮಾಡಿದರು.

ಈ ವೇಳೆ ಕಾಲೋನಿಯ ನಿವಾಸಿಗಳೊಂದಿಗೆ ಸಂವಾದ ನಡೆಸಿದ ವೈ. ಶಿವಕುಮಾರ್, ಮತದಾರರ ಪಟ್ಟಿಯಲ್ಲಿ ಹೆಸರು ಪರಿಶೀಲಿಸಿಕೊಳ್ಳುವುದು, ಅಗತ್ಯ ದಾಖಲೆಗಳನ್ನು ಸಿದ್ಧವಾಗಿಟ್ಟುಕೊಳ್ಳುವುದು ಹಾಗೂ ಎಸ್‌ಐಆರ್ ಸಂಬಂಧಿತ ಮಾಹಿತಿಯನ್ನು ಸರಿಯಾಗಿ ಒದಗಿಸುವಂತೆ ತಿಳಿಸಿದರು.

ಅಲೆಮಾರಿ ಸಮುದಾಯದ ಜನರು ತಮ್ಮ ಹಕ್ಕುಗಳ ಬಗ್ಗೆ ಜಾಗೃತರಾಗಬೇಕು.

ಮತದಾನದ ಹಕ್ಕು ಕೇವಲ ಒಂದು ಹಕ್ಕಷ್ಟೇ ಅಲ್ಲ, ಅದು ಪ್ರಜಾಪ್ರಭುತ್ವವನ್ನು ಬಲಪಡಿಸುವ ಜವಾಬ್ದಾರಿಯೂ ಆಗಿದೆ ಎಂದು ವೈ. ಶಿವಕುಮಾರ್ ಅಭಿಪ್ರಾಯಪಟ್ಟರು.

ಈ ಜಾಗೃತಿ ಅಭಿಯಾನಕ್ಕೆ ಅಲೆಮಾರಿ ಕಾಲೋನಿಯ ನಿವಾಸಿಗಳು ಉತ್ತಮ ಸ್ಪಂದನೆ ವ್ಯಕ್ತಪಡಿಸಿದ್ದು, ಎಸ್‌ಐಆರ್ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಭಾಗವಹಿಸುವ ಭರವಸೆ ನೀಡಿದರು.

## ಮಳೆಗಾಗಿ ಪ್ರಾರ್ಥಿಸಿ ಪರ್ಜನ್ಯ ಹೋಮ ಹಾಗೂ ಅಧ್ಯಾತ್ಮಿಕ ಪ್ರವಚನ



■ ಗಣಿನಾಡವಾಣಿ ವಾರ್ತೆ, ಕಂಪ್ಲಿ

ಮುಂಗಾರು ಪೂರ್ವ ಮತ್ತು ಮುಂಗಾರು ಮಳೆಗಳು ಕೈಕೊಟ್ಟಿರುವ ಹಿನ್ನೆಲೆಯಲ್ಲಿ ಕಂಪ್ಲಿ ಪಟ್ಟಣದ ಗೆಳೆಯರ ಬಳಗವು ಕಂಪ್ಲಿ ಕೋಟೆಯ ಶ್ರೀ ಹೊಳೆ ಆಂಜಿನೇಯ ದೇವಸ್ಥಾನದ ಆವರಣದಲ್ಲಿ ಮಳೆಗಾಗಿ ಪ್ರಾರ್ಥಿಸಿ ಪರ್ಜನ್ಯ ಹೋಮ, ಪೂರ್ಣಾಹುತಿ ಮತ್ತು ಅಧ್ಯಾತ್ಮಿಕ ಪ್ರವಚನ ಕಾರ್ಯಕ್ರಮವನ್ನು ಶ್ರದ್ಧೆ,ಭಕ್ತಿ,ಸಡಗರ ಸಂಭ್ರಮಗಳಿಂದು ನೆರವೇರಿಸಿದರು.

ಬುಧವಾರ ಕಂಪ್ಲಿ-ಕೋಟೆಯ ಶ್ರೀ ಹೊಳೆ ಆಂಜಿನೇಯ ದೇವಸ್ಥಾನದ ಆವರಣದಲ್ಲಿ ಗ್ರಾಮ ಪುರೋಹಿತರಾದ ಜೆ.ನಾಗರಾಜಾಚಾರ್ ಮತ್ತು ಸಂಗಡಿಗರಿಂದ ವರ್ಷವೃಷ್ಠಿಗಾಗಿ,ವರ್ಣಪ್ರತ್ಯರ್ಥ ಆದಿತ್ಯಾದಿ,ಬ್ರಹ್ಮಾದಿ ಮಂಡಲ ಪರ್ಜನ್ಯ ಹೋಮ ಮತ್ತು ಪೂರ್ಣಾಹುತಿ ಕಾರ್ಯಕ್ರಮಗಳು ಜರುಗಿದವು.

ನಂತರ ಗಂಗಾವತಿಯ ವಿಜಯಧ್ವಜ ಮಠದ ಪಂಡಿತ್ ವಾಗೀಶಾಚಾರ್ಯ ಇವರಿಂದ ಮಹಾಭಾರತದಲ್ಲಿ ನಡೆದ ವಿರಾಟ ಪರ್ವ ಅಧ್ಯಾತ್ಮಿಕ ಪ್ರವಚ ಕಾರ್ಯಕ್ರಮ ಜರುಗಿತು.

ನಂತರ ಆಗಮಿಸಿದ್ದ ಸಕಲ ಸದ್ಭಕ್ತರು ಮಳೆಗಾಗಿ ಪ್ರಾರ್ಥಿಸಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು. ಕೊನೆಯಲ್ಲಿ ನೆರೆದಿದ್ದ ಸಕಲ ಸದ್ಭಕ್ತರಿಗೂ ತೀರ್ಥ, ಪ್ರಸಾದ ವಿತರಣೆ ಜರುಗಿತು.ಕಾರ್ಯಕ್ರಮದಲ್ಲಿ ಕಂಪ್ಲಿ ಮತ್ತು ಕೋಟೆಯ ರೈತರು, ಸಾರ್ವಜನಿಕರು ಭಾಗವಹಿಸಿದ್ದರು.

## ಹೆಚ್ಚುವರಿಯಾಗಿ ಡಾಟಾ ಎಂಟ್ರಿ ಆಪರೇಟರ್ ನೇಮಕಕ್ಕೆ ಆಗ್ರಹ

■ ಗಣಿನಾಡವಾಣಿ ವಾರ್ತೆ, ಕಂಪ್ಲಿ

ಸರ್ಕಾರದ ವಿವಿಧ ಯೋಜನೆಗಳಿಗಾಗಿ ನಾನಾ ಅರ್ಜಿಗಳನ್ನು ಸಲ್ಲಿಸಲು ತುಂಬಾ ಸಮಸ್ಯೆ ಉಂಟಾಗುತ್ತಿದ್ದು, ಇದರಿಂದ ಕೂಡಲೇ ಹೆಚ್ಚುವರಿಯಾಗಿ ಡಾಟಾ ಆಪರೇಟರ್ ನೇಮಿಸಬೇಕೆಂದು ಆಗ್ರಹಿಸಿ, ಭೀಮ್ ಆರ್ಮಿ ಪದಾಧಿಕಾರಿಗಳು ಪಟ್ಟಣದಲ್ಲಿ ತಹಶೀಲ್ದಾರ್ ಕಚೇರಿಯಲ್ಲಿ ತಹಶೀಲ್ದಾರ್ ಜೂಗಲ್ ಮಂಜುನಾಯಕಗೆ ಬುಧವಾರ ಮನವಿ ಪತ್ರ ಸಲ್ಲಿಸಿದರು.



ನಂತರ ಭೀಮ್ ಆರ್ಮಿಯ ಗೌರವಾಧ್ಯಕ್ಷ ಸಣಾಪುರ ಮರಿಸ್ವಾಮಿ ಮಾತನಾಡಿ, ತಾಲೂಕು ಕೇಂದ್ರವಾಗಿ ಕೆಲ ವರ್ಷಗಳು ಕಳೆದಿವೆ. ಇಲ್ಲಿನ ಜನಸಂಖ್ಯೆ ಹೆಚ್ಚಾಗುವ ಜೊತೆಗೆ ಸರ್ಕಾರದ ಸೌಲಭ್ಯಗಳನ್ನು ಜನತೆಗೆ ತಲುಪಿಸಬೇಕಾಗಿದೆ.

ಇಲ್ಲಿನ ಕಂದಾಯ ಇಲಾಖೆಯ ನಾಡ ಕಛೇರಿಯಲ್ಲಿ ಹಲವು ವರ್ಷಗಳಿಂದ ಒಬ್ಬರೇ ಡಾಟಾ ಆಪರೇಟರ್ ಇದ್ದಾರೆ. ಆದರೆ, ಇತ್ತೀಚೆಗೆ ಜನಸಂಖ್ಯೆ ಹೆಚ್ಚಾದಂತೆಲ್ಲಾ ಅರ್ಜಿದಾರರು ಹೆಚ್ಚಾಗುತ್ತಿದ್ದಾರೆ. ಜಾತಿ, ಆದಾಯ, ಹೊಸ ಎ,ಬಿ,ಸಿ ತಿದ್ದುಪಡಿ, ವಿಧವಾ ವೇತನ, ಸರ್ವೆ ಅರ್ಜಿ ಸೇರಿ ವಿವಿಧ ಅರ್ಜಿಗಳನ್ನು ಸಲ್ಲಿಸಲು ಗ್ರಾಮೀಣ ಭಾಗದ ಜನರು ಮತ್ತು ರೈತರು ಶಾಲಾ ಮಕ್ಕಳು ಬಹಳಷ್ಟು ಜನರು ಬರುತ್ತಾರೆ. ಆದರೆ, ಒಬ್ಬ ಡಾಟಾ ಆಪರೇಟರ್ ಎಲ್ಲಾ ಜನರ ಅರ್ಜಿ ಸ್ವೀಕರಿಸಲು ಬಹಳ ತೊಂದರೆಯಾಗುತ್ತದೆ. ಈ ಕಾರ್ಯಾಲಯದಲ್ಲಿ ಸರ್ಕಾರ ನಿಗಧಿಪಡಿಸಿದ ಧರಪಟ್ಟಿ ಹಾಕಿ, ಶ್ರೀಘದಲ್ಲಿ ಹೆಚ್ಚುವರಿಯಾಗಿ ಡಾಟಾ ಎಂಟ್ರಿ ಆಪರೇಟರ್ ನೇಮಿಸಬೇಕು ಎಂದರು.

ಭೀಮ್ ಆರ್ಮಿ ಅಧ್ಯಕ್ಷ ಎ.ಎಸ್.ಯಲ್ಲಪ್ಪ ಮಾತನಾಡಿ, ಜನರು ಸಲ್ಲಿಸುವ ಪ್ರತಿ ಅರ್ಜಿಗೂ ಶುಲ್ಕದ ಪಟ್ಟಿಯನ್ನು ಕಚೇರಿಯಲ್ಲಿ ಅಳವಡಿಸಬೇಕು. ನಾಡ ಕಾರ್ಯಾಲಯದಲ್ಲಿ ಸರ್ಕಾರ ನಿಗಧಿ ಪಡಿಸಿದ ಧರಪಟ್ಟಿ ಹಾಕಿ ಆದಷ್ಟು ಬೇಗ ಹೆಚ್ಚುವರಿ ಡಾಟಾ ಎಂಟ್ರಿ ಆಪರೇಟರ್ ಅನ್ನು ನಿಯೋಜಿಸಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಪ್ರಮುಖರಾದ ಸಿಕ್ಲಿ ಬಸವರಾಜ, ಆರ್.ಎಂ.ಎಚ್.ಧನುಷ್, ಮೆಟ್ರಿ ಬಸವರಾಜ, ಎಚ್.ಹುಲಿಗೇಶ್, ಪ್ರವೀಣ, ಶಿವಕುಮಾರ್, ಬಸಮ್ಮ ಇತರಿದ್ದರು.

## ಜಿ.ಆರ್. ಹಳ್ಳಿ ಸರ್ಕಾರಿ ಪ್ರೌಢಶಾಲೆಯಲ್ಲಿ ಡೆಂಗ್ಯೂ ವಿರೋಧಿ ಮಾಸಾಚರಣೆ



■ ಗಣಿನಾಡವಾಣಿ ವಾರ್ತೆ, ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ ಜಿ.ಆರ್.ಹಳ್ಳಿಯ ಸರ್ಕಾರಿ ಪ್ರೌಢಶಾಲೆಯಲ್ಲಿ ಗುರುವಾರ ಹಮ್ಮಿಕೊಳ್ಳಲಾಗಿದ್ದ 'ಡೆಂಗ್ಯೂ ವಿರೋಧಿ ಮಾಸಾಚರಣೆ' ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಕೀಟಜನ್ಯ ರೋಗಗಳು ಹಾಗೂ ಜನಸಂಖ್ಯಾ ನಿಯಂತ್ರಣದ ಕುರಿತು ವಿಶೇಷ ಜಾಗೃತಿ ಮೂಡಿಸಲಾಯಿತು.

ಈ ವೇಳೆ ಮಾತನಾಡಿದ ಉಪಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಗೋವಿಂದರೆಡ್ಡಿ ಕೊಣ್ಣೂರು, ಡೆಂಗ್ಯೂ, ಮಲೇರಿಯಾದಂತಹ ಕೀಟಜನ್ಯ ರೋಗಗಳ ಲಕ್ಷಣಗಳು ಕಂಡುಬಂದ ತಕ್ಷಣವೇ ಎಚ್ಚೆತ್ತುಕೊಳ್ಳಬೇಕು. ಮುನ್ನೆಚ್ಚರಿಕೆ ಕ್ರಮಗಳು ಹಾಗೂ ಸೂಕ್ತ ಚಿಕಿತ್ಸೆಯಿಂದ ಇವುಗಳನ್ನು ತಡೆಗಟ್ಟಬಹುದು. ರೋಗ ನಿಯಂತ್ರಣದಲ್ಲಿ ಆರೋಗ್ಯ ಇಲಾಖೆಯಷ್ಟೇ ಸಾರ್ವಜನಿಕರ ಪಾತ್ರವೂ ಅತ್ಯಂತ ಪ್ರಮುಖವಾಗಿದೆ ಎಂದರು.

ದೇಶದಲ್ಲಿ ಉಂಟಾಗುತ್ತಿರುವ ಜನಸಂಖ್ಯಾ ಸ್ಫೋಟದಿಂದ ಪ್ರಕೃತಿ ಮತ್ತು ಸಮಾಜದ ಮೇಲೆ ಸಾಕಷ್ಟು ದುಷ್ಪರಿಣಾಮಗಳು ಬೀರುತ್ತಿವೆ. ಜನಸಂಖ್ಯಾ ಸ್ಥಿರತೆ ಕಾಯ್ದುಕೊಳ್ಳಲು ಸರ್ಕಾರ ಜಾರಿಗೆ ತಂದಿರುವ ತಾತ್ಕಾಲಿಕ ಮತ್ತು ಶಾಶ್ವತ ಸಂತಾನ ಹರಣ ವಿಧಾನಗಳನ್ನು ಪ್ರತಿಯೊಬ್ಬರೂ ಅರಿಯಬೇಕು ಎಂದು ತಿಳಿಸಿದರು.

ಆರೋಗ್ಯ ನಿರೀಕ್ಷಣಾಧಿಕಾರಿ ಪ್ರಶಾಂತ್ ಮಾತನಾಡಿ, ಕ್ಷಯ ಮತ್ತು ಕುಷ್ಠರೋಗಗಳ ಲಕ್ಷಣಗಳು, ಅವು ಹರಡದಂತೆ ವಹಿಸಬೇಕಾದ ಮುನ್ನೆಚ್ಚರಿಕೆಗಳು ಹಾಗೂ ಆರೋಗ್ಯ ಇಲಾಖೆಯಿಂದ ಉಚಿತವಾಗಿ ಸಿಗುವ ಅತ್ಯಾಧುನಿಕ ಚಿಕಿತ್ಸೆಗಳ ಕುರಿತು ವಿದ್ಯಾರ್ಥಿಗಳಿಗೆ ಸವಿಸ್ತಾರವಾಗಿ ಮನವರಿಕೆ ಮಾಡಿಕೊಟ್ಟರು.

ಕಾರ್ಯಕ್ರಮದಲ್ಲಿ ಶಾಲೆಯ ಶಿಕ್ಷಕರು ಹಾಗೂ ನೂರಾರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಜು. 13 ರಂದು ದ್ವಿಚಕ್ರ ವಾಹನಗಳ ಬಹಿರಂಗ ಹರಾಜು

■ ಗಣಿನಾಡವಾಣಿ ವಾರ್ತೆ, ತುಮಕೂರು

ಜಿಲ್ಲೆಯ ಶಿರಾ ಪೊಲೀಸ್ ಠಾಣೆ ಆವರಣದಲ್ಲಿರುವ ವಾರಸುದಾರರಿಲ್ಲದ 75 ದ್ವಿಚಕ್ರ ವಾಹನಗಳನ್ನು ಜುಲೈ 13 ರಂದು ಬೆಳಿಗ್ಗೆ 10 ಗಂಟೆಗೆ ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲಾಗುವುದು. ಹರಾಜು ಪ್ರಕ್ರಿಯೆಯು ಶಿರಾ ಉಪವಿಭಾಗದ ಪೊಲೀಸ್ ಉಪಾಧೀಕ್ಷಕರ ಸಮಕ್ಷಮದಲ್ಲಿ ಶಿರಾ ಪೊಲೀಸ್ ಠಾಣಾ ಆವರಣದಲ್ಲಿ ನಡೆಯಲಿದ್ದು, ಆಸಕ್ತರು ಭಾಗವಹಿಸಬೇಕೆಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

## ಜಿಲ್ಲೆಯಲ್ಲಿ ವಾಡಿಕೆ ಮಳೆಗಿಂತ ಶೇ.78 ರಷ್ಟು ಮಳೆ ಕೊರತೆ : ಪರ್ಯಾಯ ಬೆಳೆ ಬೆಳೆಯಲು ಸೂಚನೆ

■ ಗಣಿನಾಡವಾಣಿ ವಾರ್ತೆ, ವಿಜಯನಗರ

ಮುಂಗಾರು ಮಳೆ ಪ್ರಾರಂಭವಾಗಿ 40 ದಿನ ಕಳೆದರೂ ಜಿಲ್ಲಾದ್ಯಂತ ಪ್ರಸಕ್ತ ಸಾಲಿನಲ್ಲಿ ವಾಡಿಕೆ ಮಳೆಗಿಂತ ಶೇ.78 ರಷ್ಟು ಮಳೆ ಕಡಿಮೆಯಾಗಿದ್ದು, ಅದಕ್ಕೆ ಪರ್ಯಾಯವಾಗಿ ಅಲ್ಪ ಅವಧಿಯ ಬೆಳೆಗಳು ಬೆಳೆಯುವಂತೆ ಸಹಾಯಕ ಕೃಷಿ ನಿರ್ದೇಶಕ ಎಸ್. ಮನೋಹರ ಗೌಡ ಸೂಚಿಸಿದ್ದಾರೆ.

ಜಿಲ್ಲೆಯಲ್ಲಿ ಬಿತ್ತನೆ ಗುರಿ ಹೊಂದಿರುವ ಮಟ್ಟಕ್ಕಿಂತ ಕಡಿಮೆ ಬಿತ್ತನೆಯಾಗಿದ್ದು, ಪರ್ಯಾಯವಾಗಿ ಅಲ್ಪ ಅವಧಿಯ ಬೆಳೆಗಳು, ಬರ ನಿರೋಧಕ ತಳಿಗಳ ಬಿತ್ತನೆಯತ್ತ ಮುಖ ಮಾಡುವುದು ಅನಿವಾರ್ಯವಾಗಿದೆ. ಹವಾಮಾನ ವೈಪರಿತ್ಯ ಅಥವಾ ಮಳೆಯ ವಿಳಂಬದಂತಹ ಸಂದರ್ಭಗಳಲ್ಲಿ ರೈತರು ನಷ್ಟವನ್ನು ತಪ್ಪಿಸಲು ಪರ್ಯಾಯ ಕೃಷಿ ಪದ್ಧತಿಗಳನ್ನು ಕಾಲ ಕಾಲಕ್ಕೆ ಅಳವಡಿಸಿಕೊಳ್ಳಬೇಕು. ಸಕಾಲಕ್ಕೆ ಮಳೆಯಾಗದಿದ್ದಾಗ ಕಡಿಮೆ ಅವಧಿಯ ಬೆಳೆಗಳನ್ನು ಬಿತ್ತುವುದು ಮತ್ತು ಮಣ್ಣಿನ ತೇವಾಂಶ ಕಾಪಾಡಿಕೊಳ್ಳಲು ಬೆಳೆ ಸಾಲುಗಳ ಮಧ್ಯೆ ಒಣಗಿದ ಎಲೆ ಅಥವಾ ಕಳೆಯನ್ನು ಹೊದಿಕೆಯಾಗಿ ಬಳಸುವುದರಿಂದ ಬರ ಪರಿಸ್ಥಿತಿ ನಿರ್ವಹಣೆಯಲ್ಲಿ ಪ್ರಮುಖ ಪಾತ್ರವಹಿಸುತ್ತದೆ.

ಈ ಮೂಲಕ ರೈತರು ಬೆಳೆಗಳನ್ನು ಆಯ್ಕೆಮಾಡುವ ಸಂದರ್ಭದಲ್ಲಿ ಬರ ನಿರೋಧಕ ಬೆಳೆ ಮತ್ತು ತಳಿಗಳನ್ನು, ಕಡಿಮೆ ಅವಧಿಯ ಬೆಳೆ ಮತ್ತು ತಳಿಗಳನ್ನು, ಉತ್ಪಾದನಾ ವೆಚ್ಚ ಕಡಿಮೆ ಇರುವ ಹಾಗೂ ರೋಗ ಮತ್ತು ಕೀಟ ನಿರೋಧಕ ತಳಿಗಳನ್ನು ಆಯ್ಕೆ ಮಾಡಬೇಕು.

ಬಿತ್ತನೆ ಸಮಯದಲ್ಲಿ ಬೀಜಗಳನ್ನು ನೆನೆಸಿ ಬಿತ್ತುವುದು, ಪೊಟ್ಯಾಶ್, ಕ್ಯಾಲ್ಸಿಯಂ ಕ್ಲೋರೈಡ್ ಅಥವಾ ಸುಣ್ಣದಿಂದ ಬೀಜೋಪಚಾರ ಮಾಡಿದ ಬೀಜಗಳನ್ನು ಬಿತ್ತಬೇಕು.

ಮುಂಗಾರು ಮಳೆ ತಡವಾಗಿದ್ದರಿಂದ ಪರ್ಯಾಯವಾಗಿ ಜೋಳ, ಹಿಂಗಾರು ಜೋಳ ಮತ್ತು ಸೂರ್ಯಕಾಂತಿ ಹಾಗೂ ಸಜ್ಜೆ, ತೊಗರಿ ಬೆಳೆಯನ್ನು ವೈಜ್ಞಾನಿಕವಾಗಿ ಮಿಶ್ರ ಬೆಳೆಗಳನ್ನು ಬೆಳೆಯಬೇಕು. ರೈತರು ಭೂಮಿಯ ತೇವಾಂಶವನ್ನು ಕಾಪಾಡಲು ಸಾಲಿನಿಂದ ಸಾಲಿಗೆ ಅಂತರ ಹೆಚ್ಚಿಸಿ ನವಣೆ, ರಾಗಿ, ತೊಗರಿ ಅಲ್ಪ ಅವಧಿಯ ತಳಿಗಳನ್ನು ಬಿತ್ತುವುದರ ಮೂಲಕ ಅಂತರ ಬೇಸಾಯವನ್ನು ಅಳವಡಿಸಿಕೊಳ್ಳಬೇಕು ಜೊತೆಗೆ ಕಾವಲಿನ್ ದ್ರಾವಣ ಸಿಂಪಡಿಸುವುದು ಬರ ನಿರ್ವಹಣೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಸಹಾಯಕ ಕೃಷಿ ನಿರ್ದೇಶಕ ಮನೋಹರ ಗೌಡ ಎಸ್ ಅವರು ತಿಳಿಸಿದ್ದಾರೆ.

## ಅರಳಿಹಳ್ಳಿ ತಾಂಡದಲ್ಲಿ ಸಿಸಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಶಂಕುಸ್ಥಾಪನೆ



■ ಗಣಿನಾಡವಾಣಿ ವಾರ್ತೆ, ಕಂಪ್ಲಿ

ತಾಲೂಕಿನ ಸಣಾಪುರ ಗ್ರಾಪಂಯ ಅರಳಿಹಳ್ಳಿ ತಾಂಡದಲ್ಲಿ 2026–27ನೇ ಸಾಲಿನ ತಾಂಡ ಅಭಿವೃದ್ಧಿ ನಿಗಮದ ಸುಮಾರು 20 ಲಕ್ಷ ವೆಚ್ಚದಲ್ಲಿ ನಿರ್ಮಿಸಲಿರುವ ಸಿಸಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಸ್ಥಳೀಯ ಮುಖಂಡರು ಬುಧವಾರ ಶಂಕುಸ್ಥಾಪನೆ ನೆರವೇರಿಸಿದರು.ನಂತರ ಮುಖಂಡ ಕೆ.ಲಿಂಗಪ್ಪ ಮಾತನಾಡಿ, ಅರಳಿಹಳ್ಳಿ ತಾಂಡಕ್ಕೆ ಹೆಚ್ಚಿನ ಮುತುವರ್ಜಿವಹಿಸಿ, ಸಾಕಷ್ಟು ಅಭಿವೃದ್ಧಿ ಕಾರ್ಯಗಳೊಂದಿಗೆ ಸೌಲಭ್ಯಗಳನ್ನು ಕಲ್ಪಿಸುತ್ತಿದ್ದಾರೆ. ಈಗ ಸಿಸಿ ರಸ್ತೆ ಅಭಿವೃದ್ಧಿ ಚಾಲನೆ ಸಿಕ್ಕಿದೆ. ಗುತ್ತಿಗೆದಾರರು ಗುಣಮಟ್ಟದ ಕಾಮಗಾರಿಯನ್ನು ಕಾಲ ಮಿತಿಯಲ್ಲಿ ಪೂರ್ಣಗೊಳಿಸಬೇಕು. ಕ್ಷೇತ್ರದಲ್ಲಿ ಜನಪರ ಸೇವೆಯೊಂದಿಗೆ ಮೂಲಸೌಕರ್ಯ ಕಲ್ಪಿಸಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಮುಖಂಡರಾದ ಪೇಂಟರ್ ಮಸ್ತಾನ್, ಎ.ಕೆ. ಗವಿಸಿದ್ದಪ್ಪ, ಇಟಗಿ ವಿರೇಶ ಸೇರಿದಂತೆ ಸ್ಥಳೀಯರಿದ್ದರು.

## ಅಸಾಧಾರಣ ಪ್ರತಿಭೆಯುಳ್ಳ ಮಕ್ಕಳಿಗೆ ಜಿಲ್ಲಾಮಟ್ಟದ ಪ್ರಶಸ್ತಿಗೆ ಅರ್ಜಿ

■ ಗಣಿನಾಡವಾಣಿ ವಾರ್ತೆ, ಚಿತ್ರದುರ್ಗ

ಹೊಯ್ಸಳ ಮತ್ತು ಕೆಳದಿ ಚನ್ನಮ್ಮ ಪ್ರಶಸ್ತಿ ಯೋಜನೆಯಡಿ ಅಸಾಧಾರಣ ಪ್ರತಿಭೆಯುಳ್ಳ ಮಕ್ಕಳಿಗೆ ಜಿಲ್ಲಾಮಟ್ಟದ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ. ಜುಲೈ 30 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.

ನಾವೀನ್ಯತೆ, ತಾರ್ಕಿಕ ಸಾಧನೆಗಳು, ಕ್ರೀಡೆ, ಕಲೆ, ಸಾಂಸ್ಕೃತಿಕ ಹಾಗೂ ಸಂಗೀತ ಕ್ಷೇತ್ರಗಳಲ್ಲಿ ಅಸಾಧಾರಣ ಸಾಧನೆ ಮಾಡಿದ 5 ರಿಂದ 18 ವರ್ಷದೊಳಗಿನ ಪ್ರತಿ ಕ್ಷೇತ್ರದಲ್ಲಿ ಇಬ್ಬರಂತೆ ಒಟ್ಟು 8 ಮಕ್ಕಳಿಗೆ ಜಿಲ್ಲಾ ಮಟ್ಟದ ಪ್ರಶಸ್ತಿಗೆ ಆಯ್ಕೆ ಮಾಡಲು ಅರ್ಜಿ ಆಹ್ವಾನಿಸಲಾಗಿದೆ.

ಪ್ರಶಸ್ತಿಗೆ ಆಯ್ಕೆ ಮಾಡಲು ಮಾನದಂಡಗಳು: 5 ರಿಂದ 18 (ಜುಲೈ 31ರಂತೆ) ವರ್ಷದೊಳಗಿರಬೇಕು. ನಾವೀನ್ಯತೆ, ತಾರ್ಕಿಕ ಸಾಧನೆಗಳು, ಕ್ರೀಡೆ ಮತ್ತು ಕಲೆ, ಸಾಂಸ್ಕೃತಿಕ, ಸಂಗೀತ ಈ ಕ್ಷೇತ್ರಗಳಲ್ಲಿ ಅಸಾಧಾರಣ ಪ್ರತಿಭೆ ಹೊಂದಿರಬೇಕು. ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿದ ವಯಸ್ಸಿನ ಬಗ್ಗೆ ಜನನ ಪ್ರಮಾಣ ಪತ್ರದ ಪ್ರತಿ ಲಗತ್ತಿಸಬೇಕು. ಪ್ರತಿಭೆಯನ್ನು ಹೊಂದಿರುವ ಬಗ್ಗೆ ಪ್ರಮುಖ ದಿನಪತ್ರಿಕೆಗಳಲ್ಲಿ ಪ್ರಕಟಗೊಂಡಿರುವ ಪತ್ರಿಕೆ ತುಣುಕು ಅಥವಾ ಪ್ರಮಾಣ ಪತ್ರಗಳನ್ನು ಲಗತ್ತಿಸಬೇಕು. ಅಂತರಾಷ್ಟ್ರೀಯ, ರಾಷ್ಟ್ರೀಯ, ರಾಜ್ಯ ಮಟ್ಟದಲ್ಲಿ ಭಾಗವಹಿಸಿ ಪ್ರಶಸ್ತಿ ಪಡೆದಿರುವ ಮಾಹಿತಿ, ಸಾಧಿಸಿರುವ ಪ್ರತಿಭೆಯನ್ನು ಸಮರ್ಥಿಸಲು ಪೂರಕ ದಾಖಲಾತಿಗಳನ್ನು ಸಲ್ಲಿಸಬೇಕು. ಅರ್ಜಿದಾರರು ಕರ್ನಾಟಕ ರಾಜ್ಯದಲ್ಲಿ ನೆಲಸಿರಬೇಕು.

ಆಸಕ್ತರು ನಿಗಧಿತ ನಮೂನೆಯಲ್ಲಿ ಭರ್ತಿ ಮಾಡಿದ ಅರ್ಜಿಯೊಂದಿಗೆ, ಅಗತ್ಯ ದಾಖಲೆಗಳನ್ನು ಲಗತ್ತಿಸಿ ಸಲ್ಲಿಸಬೇಕು. ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ನೇತೃತ್ವದ ಸಮಿತಿಯಲ್ಲಿ ಪ್ರಶಸ್ತಿಗಾಗಿ ಮಕ್ಕಳನ್ನು ಆಯ್ಕೆ ಮಾಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಾಲಭವನ ಆವರಣ, ಚಿತ್ರದುರ್ಗ ಇಲ್ಲಿ ಸಂಪರ್ಕಿಸುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

## ಕಾನೂನುಬಾಹಿರ ಚಟುವಟಿಕೆಗಳು ಕಂಡುಬಂದಲ್ಲಿ ತಕ್ಷಣ ಪೊಲೀಸರಿಗೆ ಮಾಹಿತಿ ನೀಡಿ : ಮಹಮ್ಮದ್ ಖಾಸಿಂ

■ ಗಣಿನಾಡವಾಣಿ ವಾರ್ತೆ, ಸಿರುಗುಪ್ಪ



"ಮಾದಕ ವಸ್ತುಗಳ ಜಾಲವನ್ನು ಬೇರುಸಹಿತ ಕಿತ್ತೊಗೆಯಲು ಕೇವಲ ಕಾನೂನುಗಳಿಂದ ಮಾತ್ರ ಸಾಧ್ಯವಿಲ್ಲ. ಇದಕ್ಕೆ ಪೋಷಕರು, ಶಿಕ್ಷಕರು ಮತ್ತು ಇಡೀ ಸಮಾಜದ ಸಹಕಾರ ಅತ್ಯಗತ್ಯ. ನಿಮ್ಮ ಸುತ್ತಮುತ್ತ ಇಂತಹ ಕಾನೂನುಬಾಹಿರ ಚಟುವಟಿಕೆಗಳು ಕಂಡುಬಂದಲ್ಲಿ ತಕ್ಷಣ ಪೊಲೀಸರಿಗೆ ಮಾಹಿತಿ ನೀಡಿ" ಎಂದು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಮಹಮ್ಮದ್ ಖಾಸಿಂ ಹೇಳಿದರು

ನಗರದ ಬಸವೇಶ್ವರ ಪದವಿ ಕಾಲೇಜಿನಲ್ಲಿ ಆರೋಗ್ಯ ಇಲಾಖೆ ವತಿಯಿಂದ ಗುರುವಾರ ಆಯೋಜಿಸಿದ್ದ ಅಂತರಾಷ್ಟ್ರೀಯ ಮಾದಕ ವಸ್ತು ಸೇವನೆ ಮತ್ತು ತಡೆಗಟ್ಟುವಿಕೆಯ ಜಾಗೃತಿ ಕಾ2ರ್ಯಕ್ರಮದಲ್ಲಿ ಮಾತನಾಡಿದರು.

ಯುವ ಪೀಳಿಗೆಯನ್ನು ಹೆಮ್ಮಾರಿಯಂತೆ ಕಾಡುತ್ತಿರುವ ಮಾದಕ ವಸ್ತುಗಳ ವ್ಯಸನದಿಂದ ಮುಕ್ತಗೊಳಿಸಲು ಮತ್ತು ಸಮಾಜದಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಜೂನ್ 26 ರಂದು ಅಂತರರಾಷ್ಟ್ರೀಯ ಮಾದಕ ವಸ್ತು ಸೇವನೆ ಮತ್ತು ತಡೆಗಟ್ಟುವಿಕೆಯ ಜಾಗೃತಿಯನ್ನು ಮೂಡಿಸಲು ಆಚರಿಸಲಾಗುತ್ತದೆ.

ಇತ್ತೀಚಿನ ದಿನದಲ್ಲಿ ಅನೇಕ ಯುವಕ ಮತ್ತು ಯುವತಿಯರು ಮಾದಕ ದ್ರವ್ಯದ ಚಟಕ್ಕೆ ಬಲಿಯಾಗಿದ್ದಾರೆ. ಹದಿಹರೆಯದವರಲ್ಲಿ ಮಾದಕ ವ್ಯಸನದ ಚಟ ಹೆಚ್ಚುತ್ತಿದ್ದು, ಸಮಾಜದ ನಿರ್ಲಕ್ಷ್ಯದಿಂದಾಗಿ ಇಂದು ಯುವ ಜನತೆ ಹೆಚ್ಚೆಚ್ಚು ಈ ದುಶ್ಚಟಕ್ಕೆ ಬಲಿಯಾಗುತ್ತಿದ್ದಾರೆ. ಇದು ಯುವ ಜನತೆಯ ಆರೋಗ್ಯ ಮತ್ತು ವೃತ್ತಿ ಜೀವನದ ಮೇಲೆ ಜೊತೆಗೆ ಸಮಾಜದ ಮೇಲೆ ಸಾಕಷ್ಟು ಪರಿಣಾಮ ಬೀರುತ್ತಿದೆ. ಈ ಹಿನ್ನೆಲೆಯಲ್ಲಿ ಈ ಮಾದಕ ದ್ರವ್ಯ ಮುಕ್ತ ಸಮಾಜ ನಿರ್ಮಾಣ ಮಾಡುವುದು ನಮ್ಮೆಲ್ಲರ ಗುರಿಯಾಗಿದೆ ಎಂದರು.

ಮಾದಕವಸ್ತು ಸೇವನೆ ಮಾಡುವವರ ಮೇಲೆ ಮಾತ್ರವಲ್ಲದೇ ಸಮಾಜನ ಮೇಲೆ ಕೂಡ ಭಾರೀ ಪರಿಣಾಮ ಬೀರುತ್ತದೆ. ಇದು ಸಾಮಾಜಿಕವಾಗಿ, ದೈಹಿಕವಾಗಿ, ಸಾಂಸ್ಕೃತಿಕವಾಗಿ, ಭಾವನಾತ್ಮಕವಾಗಿ ಮತ್ತು ಆರ್ಥಿಕವಾಗಿ ಹಾಳುಮಾಡುತ್ತದೆ. ಮಾದಕ ದ್ರವ್ಯಗಳಯ ಜನರಲ್ಲಿ ಭಯ, ಆತಂಕ ಮತ್ತು ಅಭದ್ರತೆಯ ಭಾವನೆಯನ್ನು ಉಂಟುಮಾಡುತ್ತದೆ. ಇದು ಮೆದುಳು ಮತ್ತು ನರಮಂಡಲದ ಬೂದು ದ್ರವ್ಯವನ್ನು ನೇರವಾಗಿ ಪರಿಣಾಮ ಬೀರುತ್ತದೆ, ಇದು ಅವರಿಗೆ ಸರಿಯಾದ ಪ್ರತಿಕ್ರಿಯೆಯನ್ನು ನೀಡಲು ಕಷ್ಟಕರವಾಗುತ್ತದೆ. ಮಾದಕ ವ್ಯಸನವು ಹಸಿವು ಮತ್ತು ತೂಕದ ತೀವ್ರ ನಷ್ಟ, ಮಲಬದ್ಧತೆ, ಹೆಚ್ಚಿದ ಆತಂಕ ಮತ್ತು ಕಿರಿಕಿರಿ, ನಿದ್ರಾಹೀನತೆ ಮತ್ತು ಬೌದ್ಧಿಕ ಕಾರ್ಯಚಟುವಟಿಕೆಗಳ ಕ್ರಮೇಣ ದುರ್ಬಲತೆಗೆ ಕಾರಣವಾಗಬಹುದು ಎಂದರು.ಆಪ್ತ ಸಮಾಲೋಚಕ ಮಲ್ಲೇಶಪ್ಪ, ಪ್ರಾಂಶುಪಾಲ ದಾದಾಪೀರ್ ಹಾಗೂ ವಿದ್ಯಾರ್ಥಿಗಳು ಇದ್ದರು.

**ಟಿ.ಶ್ರೀನಿವಾಸ್ ಮೊತ್ಕರ್ ಜನ್ಮದಿನ ಆಚರಣೆ : ಬಿಜೆಪಿ ಜಿಲ್ಲಾಧ್ಯಕ್ಷ ಅನಿಲ್ ನಾಯ್ಡು ಸೇರಿ ಮುಖಂಡರ ಶುಭಾಶಯ**

# ಮಾಜಿ ಶಾಸಕ ಗಾಲಿ ಸೋಮಶೇಖರ ರೆಡ್ಡಿ ಆಪ್ತ ಟಿ. ಶ್ರೀನಿವಾಸ್ ಮೊತ್ಕರ್‌ಗೆ ಜನ್ಮದಿನದ ಶುಭಾಶಯಗಳ ಸುರಿಮಳೆ







■ ಗಣಿನಾಡವಾಣಿ ವಾರ್ತೆ, ಬಳ್ಳಾರಿ

ನಗರದ ಮಹಾನಗರ ಪಾಲಿಕೆ ವಿರೋಧ ಪಕ್ಷದ ನಾಯಕ ಹಾಗೂ 24ನೇ ವಾರ್ಡಿನ ಪಾಲಿಕೆ ಸದಸ್ಯ ಟಿ.ಶ್ರೀನಿವಾಸ್ ಮೊತ್ಕರ್ ಅವರ ಜನ್ಮದಿನವನ್ನು ತಾಳೂರು ಮುಖ್ಯ ರಸ್ತೆಯಲ್ಲಿರುವ ಅವರ ಕಚೇರಿಯಲ್ಲಿ ಸಂಭ್ರಮದಿಂದ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಅನಿಲ್ ನಾಯ್ಡು, ಮಹಾನಗರ ಪಾಲಿಕೆ ಸದಸ್ಯ ಹನುಮಂತಪ್ಪ ಸೇರಿದಂತೆ ಪಕ್ಷದ ಮುಖಂಡರು, ಪಾಲಿಕೆ ಸದಸ್ಯರು, ಕಾರ್ಯಕರ್ತರು, ಹಿತೈಷಿಗಳು ಹಾಗೂ ಅಭಿಮಾನಿಗಳು ಆಗಮಿಸಿ ಪುಷ್ಪಗುಚ್ಛ ನೀಡಿ ಜನ್ಮದಿನದ ಶುಭಾಶಯಗಳನ್ನು ಕೋರಿದರು.

ಇದೇ ವೇಳೆ ಮಾತನಾಡಿದ ಬಿಜೆಪಿ ಜಿಲ್ಲಾಧ್ಯಕ್ಷ ಅನಿಲ್ ನಾಯ್ಡು, "ಟಿ. ಶ್ರೀನಿವಾಸ್ ಮೊತ್ಕರ್ ಅವರು ಜನರೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಪಕ್ಷದ ಸಂಘಟನೆ ಮತ್ತು ಸಾರ್ವಜನಿಕ ಸೇವೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ನಾಯಕ. ಅವರ ಸೇವಾ ಮನೋಭಾವ ಎಲ್ಲರಿಗೂ ಮಾದರಿಯಾಗಿದೆ" ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಮಹಾನಗರ ಪಾಲಿಕೆ ಸದಸ್ಯ ಹನುಮಂತಪ್ಪ ಮಾತನಾಡಿ, "ವಾರ್ಡ್‌ನ ಅಭಿವೃದ್ಧಿಗೆ ಆದ್ಯತೆ ನೀಡುತ್ತಾ ಜನರ ವಿಶ್ವಾಸ ಗಳಿಸಿರುವ ಟಿ.ಶ್ರೀನಿವಾಸ್ ಮೊತ್ಕರ್ ಅವರಿಗೆ ಇನ್ನಷ್ಟು ಯಶಸ್ಸು ಸಿಗಲಿ" ಎಂದು ಶುಭ ಹಾರೈಸಿದರು.

ಬಳ್ಳಾರಿ ನಗರದ ಮಾಜಿ ಶಾಸಕ ಗಾಲಿ ಸೋಮಶೇಖರ ರೆಡ್ಡಿ ಅವರ ಆಪ್ತ ಸಹೋದ್ಯೋಗಿಯಾಗಿರುವ ಟಿ.ಶ್ರೀನಿವಾಸ್ ಮೊತ್ಕರ್ ಅವರು ಸಾರ್ವಜನಿಕ ಸೇವೆಯಲ್ಲಿ ಮತ್ತಷ್ಟು ತೊಡಗಿಸಿಕೊಳ್ಳುವ ಸಂಕಲ್ಪ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಬಿಜೆಪಿ ಮುಖಂಡರು, ಕಾರ್ಯಕರ್ತರು ಹಾಗೂ ಅಪಾರ ಸಂಖ್ಯೆಯ ಅಭಿಮಾನಿಗಳು ಉಪಸ್ಥಿತರಿದ್ದರು.

# ಜುಲೈ 11 ರಂದು ಸರ್ಕಾರಿ ನೌಕರರ ಅಭಿನಂದನಾ ಸಮಾರಂಭ ಹಾಗೂ ಹಕ್ಕೊತ್ತಾಯ ಕಾರ್ಯಕ್ರಮ : ಬಳ್ಳಾರಿಯಿಂದ 500ಕ್ಕೂ ಹೆಚ್ಚು ನೌಕರರು ಭಾಗಿ

■ ಗಣಿನಾಡವಾಣಿ ವಾರ್ತೆ, ಬಳ್ಳಾರಿ



ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ವತಿಯಿಂದ ನೂತನ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಹಾಗೂ ಉಪ ಮುಖ್ಯಮಂತ್ರಿಗಳಾದ ಡಾ. ಜಿ. ಪರಮೇಶ್ವರ್ ಅವರಿಗೆ 'ನಮ್ಮಭಿಮಾನದ ಅಭಿನಂದನಾ ಸಮಾರಂಭ' ಹಾಗೂ ಪ್ರಮುಖ ಬೇಡಿಕೆಗಳ ಹಕ್ಕೊತ್ತಾಯ ಕಾರ್ಯಕ್ರಮವನ್ನು ಜು.11 ರಂದು ಬೆಂಗಳೂರಿನ ಅರಮನೆ ಮೈದಾನದ 'ತ್ರಿಪುರ ವಾಸಿನಿ'ಯಲ್ಲಿ ಆಯೋಜಿಸಲಾಗಿದೆ ಎಂದು ಸಂಘದ ಜಿಲ್ಲಾಧ್ಯಕ್ಷರು ಹಾಗೂ ರಾಜ್ಯ ಉಪಾಧ್ಯಕ್ಷರಾದ ಡಾ. ನೆಲ್ಲುದ್ರಿ ಸದಾನಂದ ತಿಳಿಸಿದ್ದಾರೆ.

ರಾಜ್ಯಾಧ್ಯಕ್ಷ ಸಿ.ಎಸ್.ಷಡಾಕ್ಷರಿ ಅವರ ನೇತೃತ್ವದಲ್ಲಿ ನಡೆಯಲಿರುವ ಈ ಸಮಾರಂಭದ ದಿವ್ಯ ಸಾನಿಧ್ಯವನ್ನು ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪರಮಪೂಜ್ಯ ಜಗದ್ಗುರುಗಳಾದ ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿಯವರು ಹಾಗೂ ತುಮಕೂರು ಸಿದ್ದಗಂಗಾ ಮಠದ ಸಿದ್ಧಲಿಂಗ ಮಹಾಸ್ವಾಮೀಜಿಯವರು ವಹಿಸಲಿದ್ದಾರೆ.

**ಸಿಜಿಹೆಚ್‌ಎಸ್ ದರ ಹೆಚ್ಚಳಕ್ಕೆ ಕೃತಜ್ಞತೆ:**

ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ಅಧಿಕಾರ ವಹಿಸಿಕೊಂಡ ತಕ್ಷಣವೇ ಸರ್ಕಾರಿ ನೌಕರರ ಆರೋಗ್ಯ ಚಿಕಿತ್ಸೆಗೆ ಸಂಬಂಧಿಸಿದ ಸಿಜಿಹೆಚ್‌ಎಸ್ ದರಗಳನ್ನು ಹೆಚ್ಚಿಸಿ ಆದೇಶ ಹೊರಡಿಸಿದ್ದಾರೆ. ಇದರಿಂದ ಸರ್ಕಾರಕ್ಕೆ 430 ಕೋಟಿ ರೂ.ಗಳ ಹೆಚ್ಚುವರಿ ಅನುದಾನ ವೆಚ್ಚವಾಗಲಿದ್ದು, ಈ ಹಿತರಕ್ಷಣಾ ಕ್ರಮಕ್ಕಾಗಿ ಸಂಘವು ಮುಖ್ಯಮಂತ್ರಿಗಳಿಗೆ ಮತ್ತು ಉಪ ಮುಖ್ಯಮಂತ್ರಿಗಳಿಗೆ ವಿಶೇಷ ಅಭಿನಂದನೆ ಸಲ್ಲಿಸಲಿದೆ.

**ಬಳ್ಳಾರಿ ಜಿಲ್ಲೆಯಿಂದ ವ್ಯಾಪಕ ಬೆಂಬಲ:**

ಜುಲೈ 11 ಎರಡನೇ ಶನಿವಾರದ ರಜಾದಿನವಾಗಿರುವುದರಿಂದ ಜಿಲ್ಲೆಯ ಸಂಡೂರು, ಸಿರುಗುಪ್ಪ, ಕಂಪ್ಲಿ, ಕುರಗೋಡು ತಾಲೂಕುಗಳು ಸೇರಿದಂತೆ ಬಳ್ಳಾರಿ ಜಿಲ್ಲೆಯಿಂದ ಅಂದಾಜು 500ಕ್ಕೂ ಹೆಚ್ಚು ಸರ್ಕಾರಿ ನೌಕರರು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಬಿ.ಎಲ್.ಓ ಹಾಗೂ ಎಸ್.ಐ.ಆರ್ ಕಾರ್ಯಕ್ಕೆ ನಿಯೋಜನೆಗೊಂಡಿರುವ ಸಿಬ್ಬಂದಿಗಳಿಗೆ ಶನಿವಾರದಂದು ಕಾರ್ಯಕ್ರಮದಲ್ಲಿ ಭಾಗವಹಿಸಲು ವಿನಾಯಿತಿ ನೀಡುವಂತೆ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಲಾಗಿದ್ದು, ಈ ಕಾರ್ಯವನ್ನು ಮುಂದಿನ ದಿನಗಳಲ್ಲಿ ಸರಿದೂಗಿಸಿಕೊಡಲಾಗುವುದು. ನೌಕರರ ಅನುಕೂಲಕ್ಕಾಗಿ ತಾಲೂಕು ಮತ್ತು ಜಿಲ್ಲಾ ಕೇಂದ್ರಗಳಿಂದ ವಾಹನ ಸೌಕರ್ಯ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪ್ರಮುಖ ಬೇಡಿಕೆಗಳ ಹಕ್ಕೊತ್ತಾಯ

ಸಹಕಾರ ಮತ್ತು ಸಮನ್ವಯತೆಯಿಂದ ಬೇಡಿಕೆಗಳನ್ನು ಈಡೇರಿಸಿಕೊಳ್ಳುವ ಸಂಪ್ರದಾಯ ಹೊಂದಿರುವ ಸಂಘವು, ಈ ವೇದಿಕೆಯ ಮೂಲಕ ಸರ್ಕಾರದ ಮುಂದೆ ಎರಡು ಪ್ರಮುಖ ಬೇಡಿಕೆಗಳನ್ನು ಮಂಡಿಸಲಿದೆ. 2023ರ ಚುನಾವಣಾ ಪ್ರಣಾಳಿಕೆಯಲ್ಲಿ ಸರ್ಕಾರ ನೀಡಿದ್ದ ಭರವಸೆಯಂತೆ ರಾಷ್ಟ್ರೀಯ ಪಿಂಚಣಿ ಯೋಜನೆ ರದ್ದುಪಡಿಸಿ, ಹಳೇ ಪಿಂಚಣಿ ಯೋಜನೆಯನ್ನು ಮರು ಜಾರಿಗೊಳಿಸಬೇಕು. ಈಗಾಗಲೇ ಕಾಂಗ್ರೆಸ್ ಆಡಳಿತವಿರುವ 5 ರಾಜ್ಯಗಳಲ್ಲಿ ಇದನ್ನು ಜಾರಿಗೊಳಿಸಲಾಗಿದೆ.

ದೇಶದ ಸುಮಾರು 22 ರಾಜ್ಯಗಳಲ್ಲಿ ಈಗಾಗಲೇ ಕೇಂದ್ರ ಮಾದರಿ ವೇತನ ಜಾರಿಯಲ್ಲಿದೆ. ರಾಜ್ಯದ 7ನೇ ವೇತನ ಆಯೋಗವೂ ಸಹ ತನ್ನ ವರದಿಯಲ್ಲಿ ಇದನ್ನು ಅನುಸರಿಸಲು ಶಿಫಾರಸ್ಸು ಮಾಡಿದ್ದು, ಇದನ್ನು ಕರ್ನಾಟಕದಲ್ಲೂ ಅನುಷ್ಠಾನಗೊಳಿಸಬೇಕು.

# ಅಧಿಕ ಬೆಲೆಗೆ ರಸಗೊಬ್ಬರ ಮಾರಾಟ ಮಾಡುತ್ತಿರುವ ಅಂಗಡಿ ಮಾಲೀಕರ ವಿರುದ್ಧ ಕ್ರಮಕ್ಕೆ ಒತ್ತಾಯ

■ ಗಣಿನಾಡವಾಣಿ ವಾರ್ತೆ, ಸಿರುಗುಪ್ಪ



ಸರ್ಕಾರ ನಿಗದಿಪಡಿಸಿದ ಬೆಲೆಗಿಂತ ಅಧಿಕ ಬೆಲೆಗೆ ರಸಗೊಬ್ಬರ ಮಾರಾಟ ಮಾಡುತ್ತಿರುವ ಅಂಗಡಿ ಮಾಲೀಕರ ಹಾಗೂ ಕರ್ತವ್ಯ ಲೋಪ ಎಸಗುತ್ತಿರುವ ತಾಲೂಕು ಕೃಷಿ ಇಲಾಖೆ ಅಧಿಕಾರಿಗಳ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸುವಂತೆ ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷ ಒತ್ತಾಯಿಸಿ ಉಪತಹಶೀಲ್ದಾರ್ ಸಿದ್ದಾರ್ಥ ಕಾರಂಜಿ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಕೆ.ಆರ.ಎಸ್. ಪಕ್ಷದ ತಾಲ್ಲೂಕು ಅಧ್ಯಕ್ಷ ಕೆ.ಎರ್ರಿಸ್ವಾಮಿ ಮಾತನಾಡಿ ಸಿರುಗುಪ್ಪ ತಾಲ್ಲೂಕಿನಾದ್ಯಂತ ಮುಂಗಾರು ಹಂಗಾಮಿನ ಕೃಷಿ ಚಟುವಟಿಕೆಗಳು ಚುರುಕಿನಿಂದ ಸಾಗುತ್ತಿದ್ದು, ರೈತರಿಗೆ ರಸಗೊಬ್ಬರಗಳ ಅವಶ್ಯಕತೆ ಹೆಚ್ಚಾಗಿದೆ.

ಆದರೆ, ಇದನ್ನೇ ಬಂಡವಾಳ ಮಾಡಿಕೊಂಡಿರುವ ತಾಲ್ಲೂಕಿನ ಕೆಲವು ರಸಗೊಬ್ಬರ ವ್ಯಾಪಾರಿಗಳು ಮತ್ತು ಅಂಗಡಿ ಮಾಲೀಕರು ಸರ್ಕಾರ ನಿಗದಿಪಡಿಸಿದ ಗರಿಷ್ಠ ಮಾರಾಟ ಬೆಲೆಗಿಂತ ಹೆಚ್ಚಿನ ಬೆಲೆಗೆ ಗೊಬ್ಬರವನ್ನು ಮಾರಾಟ ಮಾಡುತ್ತಾ ರೈತರನ್ನು ಬಹಿರಂಗವಾಗಿ ಸುಲಿಗೆ ಮಾಡುತ್ತಿದ್ದಾರೆ.

ಅಲ್ಲದೆ, ಕೃತಕ ಅಭಾವ ಸೃಷ್ಟಿಸಿ, ರಸಗೊಬ್ಬರದ ಜೊತೆಗೆ ರೈತರಿಗೆ ಬೇಡದ ಇತರೆ ಅನಗತ್ಯ ಕಿಟ್‌ಗಳನ್ನು ಅಥವಾ ಕೀಟನಾಶಕಗಳನ್ನು ಕಡ್ಡಾಯವಾಗಿ ಖರೀದಿಸಬೇಕೆಂದು ಒತ್ತಾಯಿಸುತ್ತಿರುವುದು ರೈತರ ಆಕ್ರೋಶಕ್ಕೆ ಕಾರಣವಾಗಿದೆ.

ದಂಧೆಯ ಮಾರುಕಟ್ಟೆ ಕುರಿತು ತಾಲ್ಲೂಕು ಕೃಷಿ ಇಲಾಖೆಯ ಅಧಿಕಾರಿಗಳಿಗೆ ಸಂಪೂರ್ಣ ಮಾಹಿತಿ ಇದ್ದರೂ, ಅವರು ಯಾವುದೇ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುತ್ತಿಲ್ಲ.

ಅಂಗಡಿಗಳಿಗೆ ಭೇಟಿ ನೀಡಿ ಪರಿಶೀಲಿಸಬೇಕಾದ ಅಧಿಕಾರಿಗಳು ಕಣ್ಣು ಮುಚ್ಚಿ ಕುಳಿತಿರುವುದು, ಅವರು ಈ ಅಕ್ರಮ ದಂಧೆಗೆ ಪರೋಕ್ಷವಾಗಿ ಸಹಕರಿಸುತ್ತಿದ್ದಾರೆಯೇ ಎಂಬ ಅನುಮಾನವನ್ನು ಮೂಡಿಸುತ್ತಿದೆ. ಅಧಿಕಾರಿಗಳ ಈ ಕರ್ತವ್ಯ ಲೋಪದಿಂದಾಗಿ ಬಡ ರೈತರು ಆರ್ಥಿಕವಾಗಿ ಕಂಗೆಟ್ಟು ಹೋಗಿದ್ದಾರೆ.

ತಾಲ್ಲೂಕಿನ ಎಲ್ಲಾ ರಸಗೊಬ್ಬರ ಅಂಗಡಿಗಳ ಮೇಲೆ ಕೃಷಿ ಮತ್ತು ಕಂದಾಯ ಇಲಾಖೆಯ ಉನ್ನತ ಅಧಿಕಾರಿಗಳ ತಂಡ ತಕ್ಷಣ ದಾಳಿ ನಡೆಸಿ, ಬೆಲೆ ಪಟ್ಟಿಯನ್ನು ಪರಿಶೀಲಿಸಬೇಕು.

ನಿಯಮ ಉಲ್ಲಂಘಿಸಿ ಅಧಿಕ ಬೆಲೆಗೆ ಮಾರಾಟ ಮಾಡುವ ಹಾಗೂ ಕೃತಕ ಅಭಾವ ಸೃಷ್ಟಿಸುವ ಅಂಗಡಿಗಳ ಪರವಾನಗಿಯನ್ನು ತಕ್ಷಣವೇ ರದ್ದುಪಡಿಸಿ, ಮಾಲೀಕರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಬೇಕು.

ಪ್ರತಿ ಅಂಗಡಿಯ ಮುಂಭಾಗದಲ್ಲಿ ಸರ್ಕಾರದ ನಿಗದಿತ ಬೆಲೆ ಪಟ್ಟಿ ಹಾಗೂ ದಾಸ್ತಾನು ವಿವರಗಳನ್ನು ಕಡ್ಡಾಯವಾಗಿ ಸಾರ್ವಜನಿಕವಾಗಿ ಪ್ರದರ್ಶಿಸುವಂತೆ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಈಗಾಗಲೇ ಪೂರ್ಣ ಪ್ರಮಾಣದಲ್ಲಿ ಮಳೆ ಆಗದೆ ಇರುವುದು ಹಾಗೂ ಇತರೆ ಕಾರಣಗಳಿಂದ ಸಂಕಷ್ಟದಲ್ಲಿರುವ ತಾಲ್ಲೂಕಿನ ರೈತರ ಹಿತದೃಷ್ಟಿಯಿಂದ ತಹಶೀಲ್ದಾರ್ ಅವರು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕು ಎಂದರು.

ಯಲ್ಲಪ್ಪ, ಮಹಾನಂದಿ, ಸಣ್ಣ ಭಾಷ, ಶಿವಪ್ಪ, ಗಾದಿಲಿಂಗಪ್ಪ, ಗಂಗಾಧರ, ಜಿಲಾನಿ ಇದ್ದರು.

## ಎಸ್‌ಐಆರ್ ಅರಳಹಳ್ಳಿ ತಾಂಡದಲ್ಲಿ ನೂರಕ್ಕೆ ನೂರು ಪ್ರಗತಿ : ಮತಗಟ್ಟೆ ಅಧಿಕಾರಿಗೆ ತಾಲ್ಲೂಕು ಆಡಳಿತದಿಂದ ಸನ್ಮಾನ



■ ಗಣಿನಾಡವಾಣಿ ವಾರ್ತೆ, ಕಂಪ್ಲಿ

ದೇಶಾದ್ಯಂತ ಬರಿ ಸದ್ದು ಮಾಡುತ್ತಿರುವ ಮತದಾರರ ವಿಶೇಷ(ಎಸ್‌ಐಆರ್) ಸಮಗ್ರ ಪರಿಷ್ಕರಣೆ ಬಗ್ಗೆ ಹಲವಾರು ಆರೋಪ ಪ್ರತ್ಯಾರೋಪಗಳಿದ್ದರೂ ಸಹಿತ ಕಂಪ್ಲಿ ತಾಲ್ಲೂಕಿನ ಸಣಾಪುರ ಗ್ರಾ.ಪಂ. ವ್ಯಾಪ್ತಿಯ ಅರಳಹಳ್ಳಿ ತಾಂಡದಲ್ಲಿ ಎಸ್ ಐ ಆರ್ ಪ್ರಕ್ರಿಯೆ ನೂರಕ್ಕೆ ನೂರು ಪ್ರಗತಿ ಸಾಧಿಸಿದ್ದು, ಈ ಸಾದನೆಗೆ ಕಾರಣರಾದ ಅರಳಹಳ್ಳಿ ತಾಂಡದ ಮತಗಟ್ಟೆ ಅಧಿಕಾರಿ ಕಟ್ಟಿಮನಿ ಸರಸ್ವತಿ ಅವರನ್ನು ತಾಲ್ಲೂಕು ಆಡಳಿತದಿಂದ ತಹಸಿಲ್ದಾರ್ ಜೂಗಲ್ ಮಂಜುನಾಯಕ ಆತ್ಮೀಯವಾಗಿ ಸನ್ಮಾನಿಸುವ ಮೂಲಕ ತಾಲ್ಲೂಕು ಆಡಳಿತದಿಂದ ಗೌರವ ಸಲ್ಲಿಸಿದರು. ಅರಳಹಳ್ಳಿ ತಾಂಡದಲ್ಲಿ 683 ಮತದಾರರಿದ್ದು, ಈ ಎಲ್ಲಾ ಮತದಾರರ ಮನೆಗಳಿಗೆ ಎನ್ಯುಮರೇಷನ್ ಅರ್ಜಿಗಳನ್ನು ಸಮರ್ಪಕವಾಗಿ ವಿತರಿಸಿದ್ದಲ್ಲದೆ, ಪುನಃ ಭರ್ತಿ ಮಾಡಿದ ಅರ್ಜಿಗಳನ್ನು ವಾಪಸ್ಸು ಪಡೆದು ಆ ಎಲ್ಲಾ ಅರ್ಜಿಗಳನ್ನು ಆನ್ ಲೈನ್ ಮೂಲಕ ಸಲ್ಲಿಸುವಲ್ಲಿ ಮತಗಟ್ಟೆ ಸಂಖ್ಯೆ 5ದರ ಮತಗಟ್ಟೆ ಅಧಿಕಾರಿ ಕಟ್ಟೆಮನಿ ಸರಸ್ವತಿಯವರು ಯಶಸ್ವಿಯಾಗಿದ್ದು, ತಾಲ್ಲೂಕು ಆಡಳಿತದಿಂದ ಗೌರವವನ್ನು ಸ್ವೀಕರಿಸಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ಕಂಪ್ಲಿ ತಾಲ್ಲೂಕು ತಹಸಿಲ್ದಾರರು, ಸಹಾಯಕ ಮತದಾರರ ನೋಂದಣಾಧಿಕಾರಿಗಳಾದ ಜೂಗಲ್ ಮಂಜುನಾಯಕ ಅವರು ನಮ್ಮ ತಾಲ್ಲೂಕಿನಲ್ಲಿ ಎಸ್ ಐ ಆರ್ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಅದರಲ್ಲೂ ಮುಖ್ಯವಾಗಿ ತಾಲ್ಲೂಕಿನ ಸಣಾಪುರ ಗ್ರಾ.ಪಂ.ವ್ಯಾಪ್ತಿಯ ಅರಹಳ್ಳಿ ತಾಂಡದಲ್ಲಿ ಬಿಎಲ್‌ಓ ಕಟ್ಟೆಮನಿ ಸರಸ್ವತಿ ನೂರಕ್ಕೆ ನೂರು ಸಾಧನೆ ಮಾಡುವಲ್ಲಿ ಯಶಸ್ವಿಯಾಗಿದ್ದು,ಇತರೆಮತಗಟ್ಟೆಅಧಿಕಾರಿಗಳಿಗೆಮಾದರಿಯಾಗಿದ್ದಾರೆ ಎಂದು ಪ್ರಶಂಸೆ ವ್ಯಕ್ತಪಡಿಸಿದರು. ಈ ಯಶಸ್ಸಿಗೆ ಗ್ರಾಮಾಡಳಿತಾಧಿಕಾರಿ ಲಕ್ಷ್ಮಣ ನಾಯಕ ಅವರು ಕಾರಣರಾಗಿದ್ದಾರೆಂದು ಪ್ರಶಂಸೆ ವ್ಯಕ್ತಪಡಿಸಿ ತಾಲ್ಲೂಕಿನಲ್ಲಿ ಎಲ್ಲಾ ಮತಗಟ್ಟೆ ಅಧಿಕಾರಿಗಳು ಉತ್ತಮವಾಗಿ ಕಾರ್ಯನಿರ್ವಹಿಸಿ ಜಿಲ್ಲೆ ಹಾಗೂ ರಾಜ್ಯದಲ್ಲಿ ಪ್ರಥಮ ಸ್ಥಾನವನ್ನು ಪಡೆಯಲು ಸಹಕರಿಸಬೇಕು ಎಂದರು. ಈ ಸಂದರ್ಭದಲ್ಲಿ ಶಿರಸ್ತೆದಾರರಾದ ಜಿ.ಪಂಪಪಾತಿ, ಎಸ್.ಕೆ.ರಮೇಶ್, ಕಂದಾಯಾಧಿಕಾರಿ ವೈ.ಎಂ.ಜಗದೀಶ್, ಚುನಾವಣಾ ವಿಷಯ ನಿರ್ವಾಹಕ ಸುರೇಶ್, ಕಂದಾಯ ಮತ್ತು ತಾ.ಪಂ.ಸಿಬ್ಬಂದಿಗಳು ಹಾಜರಿದ್ದರು.

# ಅಲ್ಪಸಂಖ್ಯಾತರ ಹಕ್ಕುಗಳ ರಕ್ಷಣೆಗೆ ಆಯೋಗ ಬದ್ಧ : ಯು. ನಿಸಾರ್ ಅಹ್ಮದ್



■ ಗಣಿನಾಡವಾಣಿ ವಾರ್ತೆ, ಚಿತ್ರದುರ್ಗ

ಸಂವಿಧಾನಬದ್ಧವಾಗಿ ದೇಶದ ಅಲ್ಪಸಂಖ್ಯಾತರಿಗೆ ದೊರೆತಿರುವ ಕಾನೂನಾತ್ಮಕ ಹಕ್ಕುಗಳು ಮತ್ತು ಸವಲತ್ತುಗಳನ್ನು ಸಮರ್ಪಕವಾಗಿ ತಲುಪಿಸಲು ಹಾಗೂ ಅವರ ಹಿತರಕ್ಷಣೆ ಮಾಡಲು ರಾಜ್ಯ ಅಲ್ಪಸಂಖ್ಯಾತರ ಆಯೋಗವು ಸಂಪೂರ್ಣ ಬದ್ಧವಾಗಿದೆ ಎಂದು ಆಯೋಗದ ಅಧ್ಯಕ್ಷ ಯು. ನಿಸಾರ್ ಅಹ್ಮದ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಆಯೋಜಿಸಲಾಗಿದ್ದ ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಆಯೋಗಕ್ಕೆ ಸಿವಿಲ್ ನ್ಯಾಯಾಲಯದ ಮಾದರಿಯ ವಿಶೇಷ ಅಧಿಕಾರಗಳಿದ್ದು, ಅಲ್ಪಸಂಖ್ಯಾತ ಸಮುದಾಯದ ಯಾರಿಗೇ ಆದರೂ ಅನ್ಯಾಯವಾದಲ್ಲಿ ತಕ್ಷಣವೇ ಸಮನ್ಸ್ ಜಾರಿ ಮಾಡುವ ಹಾಗೂ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವ ಶಕ್ತಿ ಇದೆ. ಸಮುದಾಯದಲ್ಲಿ ಸೌಹಾರ್ದತೆ ಹೆಚ್ಚಿಸುವುದು, ಶೈಕ್ಷಣಿಕ ಪ್ರಗತಿ, ಮಹಿಳಾ ಸಬಲೀಕರಣ ಹಾಗೂ ಕಾನೂನು ನೆರವು ನೀಡುವುದು ಆಯೋಗದ ಪ್ರಮುಖ ಉದ್ದೇಶಗಳಾಗಿವೆ. ಇದಕ್ಕಾಗಿ ಆಯೋಗದಲ್ಲಿ ನಿವೃತ್ತ ನ್ಯಾಯಾಧೀಶರು, ಐಎಎಸ್, ಐಪಿಎಸ್ ಅಧಿಕಾರಿಗಳು ಹಾಗೂ ಹಿರಿಯ ಪತ್ರಕರ್ತರನ್ನೊಳಗೊಂಡ ವಿಶೇಷ ಉಪಸಮಿತಿಗಳನ್ನು ರಚಿಸಲಾಗಿದೆ. ಈ ಸಮಿತಿಗಳು ಸಮುದಾಯದ ಸಮಸ್ಯೆಗಳ ಕುರಿತು ಆಳವಾದ ಅಧ್ಯಯನ ನಡೆಸಿ ಸರ್ಕಾರಕ್ಕೆ ಸೂಕ್ತ ಶಿಫಾರಸುಗಳನ್ನು ಸಲ್ಲಿಸಲಿವೆ ಎಂದು ಅಧ್ಯಕ್ಷ ಯು. ನಿಸಾರ್ ಅಹ್ಮದ್ ಅವರು ವಿವರಿಸಿದರು.

ರಾಜ್ಯಸರ್ಕಾರದಮುಖ್ಯಕಾರ್ಯದರ್ಶಿಗಳ ನೇತೃತ್ವದಲ್ಲಿ ಜುಲೈ 13 ರಂದು ರಾಜ್ಯ ಮಟ್ಟದ ಉನ್ನತ ಸಮಿತಿ ಸಭೆ ನಡೆಯಲಿದ್ದು, ಜಿಲ್ಲಾ ಮಟ್ಟದ ಪ್ರಗತಿ ವರದಿಗಳನ್ನು ಪರಿಶೀಲಿಸಲಾಗುವುದು. ಪ್ರಧಾನ ಮಂತ್ರಿಗಳ 15 ಅಂಶಗಳ ಕಾರ್ಯಕ್ರಮದ ಅನುಷ್ಠಾನದಲ್ಲಿ ಯಾವುದೇ ರೀತಿಯ ನಿರ್ಲಕ್ಷ್ಯ ವಹಿಸಬಾರದು ಎಂದು ಅಧಿಕಾರಿಗಳಿಗೆ ಸೂಚಿಸಿದ ಅವರು, ಪ್ರಗತಿಯ ವರದಿಯನ್ನು ನಿಯಮಿತವಾಗಿ ಸಲ್ಲಿಸಲು ಆದೇಶಿಸಿದರು.

**ಅಂಗನವಾಡಿಗಳ ಆಧುನೀಕರಣ:**

ಸಮಾಜದ ಎಲ್ಲಾ ವರ್ಗದ ಮಕ್ಕಳಿಗೂ ಉತ್ತಮ ಸೌಲಭ್ಯ ಸಿಗಬೇಕೆಂಬ ನಿಟ್ಟಿನಲ್ಲಿ ಜಿಲ್ಲೆಯಾದ್ಯಂತ ಕೇವಲ ಅಂಗನವಾಡಿಗಳ ಸುಧಾರಣೆಗಾಗಿ ಎರಡು ಹಂತಗಳಲ್ಲಿ ಒಟ್ಟಾರೆಯಾಗಿ ರೂ.350 ಕೋಟಿಗೂ ಅಧಿಕ ಬೃಹತ್ ಅನುದಾನವನ್ನು ಮಂಜೂರು ಮಾಡಿಲಾಗಿದೆ ಎಂದು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಸಭೆಯಲ್ಲಿ ತಿಳಿಸಿದರು.

ಕೇವಲ ಗಣಿ ಬಾಧಿತ ಪ್ರದೇಶಗಳಷ್ಟೇ ಅಲ್ಲದೆ, ಪರೋಕ್ಷವಾಗಿ ಬಾಧಿತವಾಗಿರುವ ಇಡೀ ಜಿಲ್ಲೆಯ ವ್ಯಾಪ್ತಿಯಲ್ಲಿ ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ಕೆಎಂಆರ್‌ಸಿ ಹಾಗೂ ಡಿಎಂಎಫ್ ನಿಧಿಯ ಬಳಕೆಯಿಂದಾಗಿ ಜಿಲ್ಲೆಯಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಹೆಚ್ಚಿನ ಬಲ ಸಿಕ್ಕಿದೆ.

ಜಿಲ್ಲೆಯ ಎಲ್ಲಾ 6 ತಾಲೂಕುಗಳ ಅಲ್ಪಸಂಖ್ಯಾತರ ವಸತಿ ನಿಲಯಗಳ ಸಮಗ್ರ ನವೀಕರಣ ಮತ್ತು ಮೂಲಸೌಕರ್ಯ ಅಭಿವೃದ್ಧಿಗಾಗಿ ರೂ.19 ಕೋಟಿ ಅನುದಾನ ಮೀಸಲಿಡಲಾಗಿದೆ. ಕಳೆದ ಒಂದೂವರೆ ವರ್ಷದಲ್ಲಿ ಜಿಲ್ಲೆಯ ವಿವಿಧ ಅಭಿವೃದ್ಧಿ ಯೋಜನೆಗಳಿಗಾಗಿ ಒಟ್ಟು ರೂ.3,200 ಕೋಟಿಗೂ ಅಧಿಕ ಅನುದಾನಕ್ಕೆ ಅನುಮೋದನೆ ತರಲಾಗಿದೆ ಎಂದರು.

**ಬಾಲ್ಯ ವಿವಾಹ ತಡೆಗೆ ಕ್ರಮ:**

ಜಿಲ್ಲೆಯ ಎಲ್ಲ ಶಾಲೆಗಳಲ್ಲಿ ಇಲಾಖೆಯ ವತಿಯಿಂದ ತಂಡಗಳನ್ನು ರಚಿಸಿ ಬಾಲ್ಯ ವಿವಾಹದ ವಿರುದ್ಧ ಜಾಗೃತಿ ಮೂಡಿಸಲಾಗುತ್ತಿದೆ. ಜಿಲ್ಲೆಯಲ್ಲಿ ಒಟ್ಟು 2428 ಅಂಗನವಾಡಿಗಳಿದ್ದು, ಅದರಲ್ಲಿ 107 ಅಲ್ಪಸಂಖ್ಯಾತರ ಅಂಗನವಾಡಿಗಳಿವೆ. ಸರ್ಕಾರದ ಆದೇಶದಂತೆ 200 ಅಂಗನವಾಡಿಗಳನ್ನು ಎಲ್‌ಕೆಜಿ ಹಾಗೂ ಯುಕೆಜಿ ತರಗತಿಗಳನ್ನು ಆರಂಭಿಸಲು ಮೇಲ್ದರ್ಜೆಗೆ ಏರಿಸಲಾಗಿದೆ. ಇದರಲ್ಲಿ 7 ಅಲ್ಪಸಂಖ್ಯಾತ ಅಂಗನವಾಡಿಗಳೂ ಸೇರಿವೆ. ಉತ್ತಮ ಕಟ್ಟಡ ಹಾಗೂ ಹೆಚ್ಚಿನ ಮಕ್ಕಳಿರುವ ಕಡೆ ಈ ಸೌಲಭ್ಯ ಕಲ್ಪಿಸಲಾಗಿದ್ದು, ಇಲಾಖೆಯಿಂದ ಅಗತ್ಯ ಪುಸ್ತಕಗಳನ್ನು ವಿತರಿಸಲಾಗಿದೆ. ಬಿಎಡ್, ಎಂಎ ಹಾಗೂ ಪದವಿ ಮುಗಿಸಿದ ಅರ್ಹ ಅಂಗನವಾಡಿ ಕಾರ್ಯಕರ್ತೆಯರಿಗೆ ಎನ್‌ಜಿಒ ಮತ್ತು ಜಿಲ್ಲಾ ಪಂಚಾಯತ್ ಸಿಇಒ ಮೂಲಕ ವಿಶೇಷ ತರಬೇತಿ ನೀಡಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕ ವಿಜಯಕುಮಾರ್ ಮಾಹಿತಿ ನೀಡಿದರು.

**ಕೋಮು ಗಲಭೆಗೆ ಅವಕಾಶ ನೀಡಬೇಡಿ:**

ಚಿತ್ರದುರ್ಗ ಜಿಲ್ಲೆ, ಕೋಮು ಸೌಹಾರ್ದತೆಗೆ ಹೆಸರಾಗಿದೆ. ಸಾರ್ವಜನಿಕ ಆಚರಣೆ ಹಾಗೂ ಮೆರವಣಿಗೆಗಳ ವೇಳೆ ಪೊಲೀಸರು ಸೂಕ್ಷ್ಮ ಪ್ರದೇಶಗಲ್ಲಿ ಕಾವಲಿದ್ದು, ಕೋಮು ಗಲಭೆಗಳು ನಡೆಯದಂತೆ ತಡಯಬೇಕು. ಬಂದೋಬಸ್ತ್ ವೇಳೆ 15 ನಿಮಿಷ ಎಚ್ಚರಿಕೆಯಿಂದ ಕೆಲಸ ನಿರ್ವಹಿಸಿದರೆ ಯಾವುದೇ ಸಮಸ್ಯೆಗಳು ಉದ್ಭವಿಸುವುದಿಲ್ಲ ಎಂದು ಅಧ್ಯಕ್ಷ ಯು. ನಿಸಾರ್ ಅಹ್ಮದ್ ಹೇಳಿದರು.

ಸರ್ಕಾರಿ ಶಾಲೆಗಳು ಅನೈತಿಕ ಚಟುವಟಿಕೆಗಳ ತಾಣಗಳಾಗದಂತೆ ಸುತ್ತಲೂ ಕಾಂಪೌಂಡ್ ನಿರ್ಮಿಸಿ ಸಿಸಿಟಿವಿ ಅಳವಡಿಸಬೇಕು. ಈ ಸ್ಥಳಗಳಲ್ಲಿ ಪೊಲೀಸರು ನಿರಂತರವಾಗಿ ಗತ್ತು ತಿರುಗಬೇಕು. ಮುಖ್ಯವಾಗಿ ಯುವಕರು ಮಾದಕ ವ್ಯಸನಗಳಿಗೆ ತುತ್ತಾಗದಂತೆ ಎಚ್ಚರ ವಹಿಸಬೇಕು ಎಂದರು.

ಜಿಲ್ಲೆಯಲ್ಲಿ ಮಾದಕ ವಸ್ತುಗಳ ಬಳಕೆಯನ್ನು ನಿರ್ಬಂಧಿಸಲಾಗುತಿದೆ. ಕಳೆದ ವರ್ಷ ಎನ್.ಡಿ.ಪಿ.ಎಸ್ ಕಾಯ್ದೆಯಡಿ 95 ಪ್ರಕರಣಗಳನ್ನು ದಾಖಲಿಸಲಾಗಿತ್ತು. ಪ್ರಸಕ್ತ ವರ್ಷದಲ್ಲಿ 97 ಪ್ರಕರಣಗಳನ್ನು ದಾಖಲಿಸಲಾಗಿದ್ದು ಮಾದಕ ವಸ್ತುಗಳ ತಡೆಗೆ ತೀವ್ರ ಕಾರ್ಯಾಚಾರಣೆ ನಡೆಸಲಾಗುತ್ತಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರ ತಿಳಿಸಿದರು.

**ಮೇಳ ಆಯೋಜಿಸಲು ಸೂಚನೆ:**

ಅಲ್ಪಸಂಖ್ಯಾತರು ಹೆಚ್ಚಿರುವ ಕಡೆ ಕಾರ್ಮಿಕ, ಕೌಶಲ ಅಭಿವೃದ್ಧಿ, ವಿಕಲಚೇತನರ ಕಲ್ಯಾಣ, ಉದ್ಯೋಗ ವಿನಿಮಯ ಕಚೇರಿ ಸೇರಿದಂತೆ ಹಲವಾರು ಇಲಾಖೆ ಸರ್ಕಾರಿ ಯೋಜನಗಳ ಕುರಿತು ಮೇಳ ಆಯೋಜಿಸಿ ಮಾಹಿತಿ ನೀಡಬೇಕು. ಮಾರುಕಟ್ಟೆ ಬೇಡಿಕಗೆ ಅನುಗುಣವಾಗಿ ಕೌಶಲ್ಯಾಭಿವೃದ್ಧಿ ತರಬೇತಿ ನೀಡಲು ಯೋಜನೆ ರೂಪಿಸಬೇಕು. ವಸತಿ ಯೋಜನೆ ಅಡಿ ಗ್ರಾಮಗಳಲ್ಲಿ ಅರ್ಹ ಅಲ್ಪಸಂಖ್ಯಾತ ಫಲಾನುಭವಿಗಳು ಲಭ್ಯವಿಲ್ಲದಿದ್ದರೆ, ಯೋಜನೆಯನ್ನು ಮಾರ್ಪಡಿಸಿ ತಾಲೂಕಿನ ಬೇರೆ ಭಾಗದ ಫಲಾನುಭವಿಗೆ ನೀಡಬೇಕು. ಬ್ಯಾಂಕುಗಳು ವಿನಾಕಾರಣ ಶಿಕ್ಷಣ, ಉದ್ಯೋಗ ಸಾಲದ ಅರ್ಜಿಗಳನ್ನು ತಿರಸ್ಕರಿಸಬಾರದು ಎಂದು ಆಯೋಗದ ಅಧ್ಯಕ್ಷ ಯು. ನಿಸಾರ್ ಅಹ್ಮದ್ ಹೇಳಿದರು.

ಸಭೆಯಲ್ಲಿ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರ ವಿಶೇಷ ಕರ್ತವ್ಯಾಧಿಕಾರಿ ಮುಜಿಬುಲ್ಲಾ ಜಫಾರ, ಜಿಲ್ಲಾ ಪಂಚಾಯಿತಿ ಸಿಪಿಓ ಗಾಯತ್ರಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪ ನಿರ್ದೇಶಕ ಮಂಜುನಾಥ್, ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ನ ವ್ಯವಸ್ಥಾಪಕ ಪ್ರಸನ್ನ ಕುಮಾರ್, ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ರೇಖಾ, ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ಅಲ್ಪಸಂಖ್ಯಾತರ ಆಯೋಗದ ಸದಸ್ಯರು ಉಪಸ್ಥಿತರಿದ್ದರು.

### ಕುಟುಂಬಗಳ ಮಾಹಿತಿ ಕ್ರೂಢೀಕರಣಕ್ಕೆ ಸೂಚನೆ

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ವತಿಯಿಂದ ಜಿಲ್ಲೆಯಲ್ಲಿ ಎಷ್ಟು ಕುಟುಂಬಗಳು ಇವೆ ಎಂಬ ನಿಖರವಾದ ಸಂಗ್ರಹಿಸಬೇಕು. ಕೇವಲ ಅಂಗನವಾಡಿಗೆ ಬರುವ ಮಕ್ಕಳನ್ನು ಮಾತ್ರ ಲೆಕ್ಕಕ್ಕೆ ತೆಗೆದುಕೊಳ್ಳುವುದಲ್ಲ, ಬದಲಿಗೆ ಸಮಗ್ರ ಕುಟುಂಬಗಳ ಸರ್ವೆ ನಡೆಸುವುದು ಮುಖ್ಯ ಎಂದು ಅವರು ಅಧಿಕಾರಿಗಳಿಗೆ ಅಧ್ಯಕ್ಷ ಯು. ನಿಸಾರ್ ಅಹ್ಮದ್ ನಿರ್ದೇಶನ ನೀಡಿದರು.

ಕುಟುಂಬಗಳ ಸರ್ವೆ ನಡೆಸಿದಾಗ ಮಾತ್ರ 3 ರಿಂದ 6 ವರ್ಷದೊಳಗಿನ ಎಷ್ಟು ಮಕ್ಕಳಿದ್ದಾರೆ ಎಂಬ ನಿಖರ ಮಾಹಿತಿ ಲಭ್ಯವಾಗುತ್ತದೆ. ಆ ಮೂಲಕ ಮಕ್ಕಳಿಗೆ ಅಗತ್ಯವಿರುವ ಪೌಷ್ಟಿಕಾಹಾರ ಹಾಗೂ ಸೌಲಭ್ಯಗಳನ್ನು ತಲುಪಿಸಲು ಸಾಧ್ಯವಾಗುತ್ತದೆ.ರಾಜ್ಯದಲ್ಲಿನ ಅಲ್ಪಸಂಖ್ಯಾತರ ಪೈಕಿ ಒಟ್ಟು ಮುಸ್ಲಿಮರಲ್ಲಿ ಶೇಕಡ 43.7 ರಷ್ಟು ಜನರು ಅನಕ್ಷರಸ್ಥರಾಗಿದ್ದಾರೆ. ಅಕ್ಷರಸ್ಥಾಗಿರುವ ಶೇಕಡ 56.3 ರಷ್ಟು ಜನರಲ್ಲಿ, ಎಸ್.ಎಸ್‌ಎಲ್.ಸಿ ವರೆಗೆ ವಿದ್ಯಾಭ್ಯಾಸ ಪೂರೈಸಿದವರ ಪ್ರಮಾಣ ಶೇಕಡ 6.3 ರಷ್ಟಿದೆ. ಅಂಗನಾಡಿಯಿಂದ 6 ವರ್ಷ ಪೂರೈಹಿಸಿದ ಯಾವ ಶಾಲೆ ದಾಖಲಾಗಿದೆ ಮಾಹಿತಿ ದೊರೆಯತ್ತಿಲ್ಲ. ಶಾಲಾ ಶಿಕ್ಷಣ ಇಲಾಖೆಯಲ್ಲಿ ದಾಖಲಾದ ಮಕ್ಕಳ ಪೈಕಿ ಅಲ್ಪಸಂಖ್ಯಾತ ಮಕ್ಕಳ ವಿವರ SATS ನಲ್ಲಿ ಲಭ್ಯವಾಗುತ್ತದೆ. ಶಾಲೆಗೆ ದಾಖಲಾದವರ ವಿವರ ದೊರೆಯವುದಿಲ್ಲ. ಈ ಹಿನ್ನಲೆಯಲ್ಲಿ ಕುಟುಂಬಗಳ ವಿವರ ಸಂಗ್ರಹಿಸುವುದು ಅಗತ್ಯವಾಗಿದೆ ಎಂದರು.

# ಮತದಾರರ ಪಟ್ಟಿ ನಿಖರತೆಗೆ ಸಹಕರಿಸಿ : ಟಿ. ವೆಂಕಟೇಶ್

## ಎಸ್‌ಐಆರ್ ಸಂಬಂಧ ಜಿಲ್ಲಾ ಚುನಾವಣಾಧಿಕಾರಿ ಟಿ.ವೆಂಕಟೇಶ್ ಅಧ್ಯಕ್ಷತೆಯಲ್ಲಿ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆ



■ ಗಣಿನಾಡವಾಣಿ ವಾರ್ತೆ, ಚಿತ್ರದುರ್ಗ

ಮತದಾರರ ಪಟ್ಟಿಯ ನಿಖರತೆ ಮತ್ತು ಪಾರದರ್ಶಕತೆ ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲಾ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಸಕಾರಾತ್ಮಕವಾಗಿ ಸಹಕರಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಗುರುವಾರ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ(ಎಸ್‌ಐಆರ್) ಸಂಬಂಧ ಮತದಾರರ ಗಣತಿ ನಮೂನೆಗಳ ವಿತರಿಸಿರುವ ಕುರಿತು ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಸಂಬಂಧ ಗಣತಿ ನಮೂನೆಗಳ ವಿತರಣೆಯ ಕಾರ್ಯವು ಪ್ರಗತಿಯಲ್ಲಿದ್ದು, ಈಗಾಗಲೇ ಶೇ.98 ರಷ್ಟು ಪ್ರಗತಿ ಸಾಧಿಸಲಾಗಿದೆ. ಬಾಕಿ ಉಳಿದಿರುವ ಶೇ.2ರಷ್ಟು ಪ್ರಕರಣಗಳಲ್ಲಿ ಮರಣ ಹೊಂದಿದವರು, ಸ್ಥಳಾಂತರಗೊಂಡವರು ಹಾಗೂ ಮನೆಗೆ ಬೀಗ ಹಾಕಿ ಬೇರೆಡೆ ವಾಸಿಸುತ್ತಿರುವವರ ವಿವರಗಳಿದ್ದು, ಇವುಗಳನ್ನು ಸರಿಪಡಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ತಿಳಿಸಿದರು.

ಜುಲೈ 08ರ ಅಂಕಿ-ಅಂಶಗಳ ಪ್ರಕಾರ ಜಿಲ್ಲೆಯ 14,40,534 ಮತದಾರರ ಪೈಕಿ ಈಗಾಗಲೇ 14,04,219 ಮತದಾರರರನ್ನು (ಶೇ.97.48) ಮ್ಯಾಪಿಂಗ್ ಮಾಡಲಾಗಿದೆ. 36,315 ಮತದಾರರ ಮ್ಯಾಪಿಂಗ್ ಬಾಕಿ ಉಳಿದಿದ್ದು, ಈ ಮತದಾರರ ವಿಳಾಸ ಪತ್ತೆಯಾಗುತ್ತಿಲ್ಲ. ಇವರು ಯಾರು ಮತ್ತು ಎಲ್ಲಿದ್ದಾರೆ ಎಂಬುದನ್ನು ಪತ್ತೆ ಹಚ್ಚಿ ಪಟ್ಟಿಯಿಂದ ತೆಗೆದುಹಾಕಲು ಅಥವಾ ಸರಿಪಡಿಸಲು ರಾಜಕೀಯ ಪಕ್ಷಗಳು ನೇಮಕ ಮಾಡಿರುವ ಬೂತ್ ಮಟ್ಟದ ಏಜೆಂಟರುಗಳು ನಮಗೆ ಸಂಪೂರ್ಣ ಮಾಹಿತಿ ನೀಡಿ ಸಹಕರಿಸಬೇಕಿದೆ. ಮರಣ ಹೊಂದಿದವರ ಡೆತ್ ಸರ್ಟಿಫಿಕೇಟ್ ಲಭ್ಯವಿದ್ದರೆ ಅಂಥವರ ಹೆಸರನ್ನು ಪಟ್ಟಿಯಿಂದ ತೆಗೆಯಲು ಸುಲಭವಾಗುತ್ತದೆ ಎಂದು ಹೇಳಿದರು.

ವಿಶೇಷವಾಗಿ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಮತದಾರರನ್ನು ಗುರುತಿಸುವಲ್ಲಿ ಸ್ಥಳೀಯ ವಾರ್ಡ್ ಸದಸ್ಯರು, ಮಾಜಿ ಕೌನ್ಸಿಲರ್‌ಗಳು ಹಾಗೂ ಗ್ರಾಮ ಪಂಚಾಯಿತಿ ಮಾಜಿ ಸದಸ್ಯರ ಪಾತ್ರ ದೊಡ್ಡದಾಗಿದೆ. ಪಕ್ಷಾತೀತವಾಗಿ ಇವರೆಲ್ಲರಿಗೂ ಸ್ಥಳೀಯ ಮತದಾರರ ಬಗ್ಗೆ ನಿಖರವಾದ ಮಾಹಿತಿ ಇರುತ್ತದೆ. ಆದ್ದರಿಂದ ತಕ್ಷಣವೇ ತಹಶೀಲ್ದಾರರ, ಇಒ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಅಧಿಕಾರಿಗಳ ನೇತೃತ್ವದಲ್ಲಿ ಸಭೆಗಳನ್ನು ಕರೆದು, ಮಹಜರು ಪ್ರಕ್ರಿಯೆಯ ಮೂಲಕ ನಿಖರ ಮಾಹಿತಿ ಪಡೆಯುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ ಅವರು, ಜಿಲ್ಲೆಯಲ್ಲಿ ಅತ್ಯಂತ ಪಾರದರ್ಶಕ ಹಾಗೂ ದೋಷಮುಕ್ತ ಮತದಾರರ ಪಟ್ಟಿ ಸಿದ್ಧಪಡಿಸಲು ಎಲ್ಲಾ ರಾಜಕೀಯ ಪಕ್ಷಗಳು ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಜಿಲ್ಲೆಯಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯು ಅತ್ಯಂತ ಯಶಸ್ವಿಯಾಗಿ ಸಾಗುತ್ತಿದ್ದು, ಗಣತಿ ನಮೂನೆಗಳ ವಿತರಣೆಯಲ್ಲಿ ಇಡೀ ರಾಜ್ಯದಲ್ಲೇ ನಮ್ಮ ಜಿಲ್ಲೆ ಮುಂಚೂಣಿಯಲ್ಲಿದೆ. ಯಾವುದೇ ಗೊಂದಲ, ವಿವಾದಗಳಿಗೆ ಆಸ್ಪದ ನೀಡದಂತೆ ಪಾರದರ್ಶಕವಾಗಿ ಕಾರ್ಯನಿರ್ವಹಿಸಲಾಗುತ್ತಿದೆ ಎಂದು ತಿಳಿಸಿದರು.

ಗಣತಿ ನಮೂನೆಗಳನ್ನು ಭರ್ತಿ ಮಾಡುವಾಗ ಸಾರ್ವಜನಿಕರಲ್ಲಿ ಉಂಟಾಗುವ ಗೊಂದಲಗಳ ತಪ್ಪಿಸಲು ವ್ಯಾಪಕ ಜಾಗೃತಿ ಮೂಡಿಸಲಾಗುತ್ತಿದೆ. ಫಾರ್ಮ್‌ಗಳಲ್ಲಿನ ಮೊದಲ ಭಾಗ ಹಾಗೂ ಎರಡನೇ ಭಾಗಗಳನ್ನು ಭರ್ತಿ ಮಾಡುವಾಗ ಆಗುವ ಸಾಮಾನ್ಯ ತಪ್ಪುಗಳನ್ನು ತಪ್ಪಿಸಲು ಬಿಎಲ್‌ಓ ಮತ್ತು ಬಿಎಲ್‌ಎಗಳಿಗೆ ವಿಶೇಷ ತರಬೇತಿ ನೀಡಲಾಗಿದೆ ಎಂದು ತಿಳಿಸಿದ ಅವರು, ಎಸ್‌ಐಆರ್ ಪ್ರಕ್ರಿಯೆಯನ್ನು ಗಂಭೀರವಾಗಿ ಪರಿಗಣಿಸಲಾಗಿದ್ದು, ಪ್ರತಿ ದಿನ ಸಂಜೆ ಎಲ್ಲಾ ತಾಲೂಕುಗಳ ಅಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಪ್ರಗತಿ ಪರಿಶೀಲನೆ ನಡೆಸಲಾಗುತ್ತಿದೆ ಎಂದು ಹೇಳಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಚುನಾವಣಾ ತಹಶೀಲ್ದಾರ್ ಬೀಬೀ ಫಾತಿಮಾ, ಕಾಂಗ್ರೆಸ್ ಪಕ್ಷದ ಎಂ.ಕೆ. ತಾಜ್‌ಪೀರ್, ಡಿ.ಎನ್.ಮೈಲಾರಪ್ಪ, ಸಂಪತ್ ಕುಮಾರ್, ಬಿಜೆಪಿ ಪಕ್ಷದ ಟಿ.ಯಶವಂತ ಕುಮಾರ್, ಬಿಎಸ್‌ಪಿ ಪಕ್ಷದ ಪ್ರಕಾಶ್, ನಿಂಗರಾಜ್ ಇದ್ದರು.

## ಕಂಪ್ಲಿಯಲ್ಲಿ ಶ್ರೀ ಸತ್ಯನಾರಾಯಣ ಸ್ವಾಮಿ ದೇವಸ್ಥಾನದ 57ನೇ ವಾರ್ಷಿಕೋತ್ಸವ : ಲೋಕಕಲ್ಯಾಣಕ್ಕಾಗಿ ವಿಶೇಷ ಹೋಮ



■ ಗಣಿನಾಡವಾಣಿ ವಾರ್ತೆ, ಕಂಪ್ಲಿ

ಪಟ್ಟಣದ ಸತ್ಯನಾರಾಯಣ ಪೇಟೆಯಲ್ಲಿ 1969ರಲ್ಲಿ ನಿರ್ಮಾಣ ಮಾಡಲಾದ ಶ್ರೀ ಸತ್ಯನಾರಾಯಣ ಸ್ವಾಮಿ ದೇವಸ್ಥಾನದಲ್ಲಿ ಸತ್ಯನಾರಾಯಣ ಸ್ವಾಮಿಗೆ ವಿವಿಧ ಅಬಿಷೇಕ,ವಿಶೇಷ ಪೂಜೆ, ವಿವಿಧ ಹೋಮಗಳು ಶ್ರದ್ಧಾ ಭಕ್ತಿಯಿಂದ ಜರುಗಿದವು. ಬೆಳಿಗ್ಗೆ ಅಮೃತ ಶಿಲೆಯ ಶ್ರೀ ಸತ್ಯನಾರಾಯಣ ಶಿಲಾ ಪ್ರತಿಮೆಗೆ ವಿವಿಧ ಅಬಿಷೇಕಗಳು ನೆರವೇರಿದ ನಂತರ ನೂತನ ವಸ್ತ್ರ, ವಿವಿಧ ಹೂಗಳು, ಚಿನ್ನಾಭರಣಗಳಿಂದ ಅಲಂಕರಿಸಿದ ಪುರೋಹಿತರಾದ ಗಂಗಾವತಿಯ ಸುಜ್ಞಾನಮೂತಿ, ಕಂಪ್ಲಿಯ ಗ್ರಾಮ ಪುರೋಹಿತ ಜೆ.ನಾಗಾರಾಚಾರ್ ಲೋಕ ಕಲ್ಯಾಣರ್ಥವಾಗಿ ನವಗ್ರಹ ಹೋಮ, ವಾಸ್ತುಹೋಮ, ಸೇರಿದಂತೆ ಇತರೆ ಹೋಮಗಳನ್ನು ನಡೆಸಿ, ಹೋಮದ ಕುಂಡಕ್ಕೆ ದೇವಸ್ಥಾನದ ಮುಖ್ಯಸ್ಥರಾದ ಜಿ.ವಿ.ಸತ್ಯನರಾಯಣಬಾಬು ದಂಪತಿಗಳು, ಜಿ.ಬಿ.ಕೋಟೇಶ ದಂಪತಿಗಳು ಪೂರ್ಣಾಹುತಿ ಸಲ್ಲಿಸಿದರು. ದೇವಸ್ಥಾನದ ಆವರಣದಲ್ಲಿ ಶ್ರೀ ಸತ್ಯನರಾಯಣ ಸ್ವಾಮಿಯ ಕಥೆಯ ಪ್ರವಚನ ಜರುಗಿತು. ನಂತರ ಸ್ವಾಮಿಗೆ ಮಹಾಮಂಗಳಾರತಿ, ತೀರ್ಥ ಪ್ರಸಾದ ವಿತರಣೆ ಜರುಗಿದ ನಂತರ ಆಗಮಿಸಿದ್ದ ಸಕಲ ಸದ್ಭಕ್ತರಿಗೆ ಅನ್ನಸಂತರ್ಪಣೆ ಜರುಗಿತು. ಕಾರ್ಯಕ್ರಮದಲ್ಲಿ ದೇವಸ್ಥಾನ ಪದಾಧಿಕಾರಿಗಳು ಸೇರಿದಂತೆ ಪಟ್ಟಣದ ವಿವಿಧ ಸಮಾಜಗಳ ಮುಖಂಡರು, ಸಾರ್ವಜನಿಕರು ಭಾಗವಹಿಸಿದ್ದರು.

## ಜುಲೈ 10 ರಂದು ಭಾರತ್ ಸೌಟ್ಸ್ ಮತ್ತು ಗೈಡ್ಸ್ "ರಾಜ್ಯ ಪುರಸ್ಕಾರ ಪ್ರಶಸ್ತಿ ಪತ್ರ ಪ್ರದಾನ ಸಮಾರಂಭ"

■ ಗಣಿನಾಡವಾಣಿ ವಾರ್ತೆ, ಬೆಂಗಳೂರು

ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ ರಾಜ್ಯ ಕೇಂದ್ರ ಕಾರ್ಯಾಲಯದ ವತಿಯಿಂದ ಕಬ್ಸ್, ಬುಲ್‌ಬುಲ್ಸ್, ಸ್ಕೌಟ್ಸ್, ಗೈಡ್ಸ್, ರೋವರ್ಸ್ ಮತ್ತು ರೇಂಜರ್ಸ್ ತಂಡಗಳಿಗೆ ಪ್ರತಿಷ್ಠಿತ ಚತುರ್ಥ ಚರಣ್, ಹೀರಕ್ ಪಂಖ್ ಹಾಗೂ ರಾಜ್ಯ ಪುರಸ್ಕಾರ ಪ್ರಶಸ್ತಿ ಪ್ರಮಾಣ ಪತ್ರ ಪ್ರದಾನ ಸಮಾರಂಭವನ್ನು ಜುಲೈ 10 ರಂದು ಸಂಜೆ 4.00 ಗಂಟೆಗೆ ಬೆಂಗಳೂರಿನ ಲೋಕಭವನದ ಗಾಜಿನ ಮನೆಯಲ್ಲಿ ಹಮ್ಮಿಕೊಳ್ಳಲಾಗಿದೆ. ಈ ಭವ್ಯ ಸಮಾರಂಭದಲ್ಲಿ ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರು ಹಾಗೂ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ಪೋಷಕರಾದ ಥಾವರ್‌ಚಂದ್ ಗೆಹ್ಲೋಟ್ ಅವರು ಪಾಲ್ಗೊಂಡು ಪ್ರಶಸ್ತಿ ಪತ್ರಗಳನ್ನು ಪ್ರದಾನ ಮಾಡಲಿದ್ದಾರೆ. ಮುಖ್ಯಮಂತ್ರಿಗಳು ಹಾಗೂ ಸಂಸ್ಥೆಯ ಅಧ್ಯಕ್ಷರಾದ ಡಿ.ಕೆ. ಶಿವಕುಮಾರ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವರು ಹಾಗೂ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ಅಪರ ರಾಜ್ಯ ಮುಖ್ಯ ಆಯುಕ್ತರಾದ ಯು.ಟಿ. ಖಾದರ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಾದ ಶ್ರೀಮತಿ ರಶ್ಮಿ ವಿ. ಮಹೇಶ್, ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರಾದ ವಿಕಾಸ್ ಕಿಶೋರ್ ಸುರಳ್ಕರ್, ಭಾರತ್ ಸೌಟ್ಸ್ ಮತ್ತು ಗೈಡ್ಸ್‌ನ ಉಪಾಧ್ಯಕ್ಷರಾದ ಕೊಂಡಜ್ಜಿ ಬ. ಷಣ್ಮುಖಪ್ಪ, ಭಾರತ್ ಸೌಟ್ಸ್ ಮತ್ತು ಗೈಡ್ಸ್‌ನ ಉಪಾಧ್ಯಕ್ಷರು ಮತ್ತು ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆಯ ಅಧ್ಯಕ್ಷರಾದ ಎ.ಎನ್. ಮಹೇಶ್, ಭಾರತ್ ಸೌಟ್ಸ್ ಮತ್ತು ಗೈಡ್ಸ್‌ನ ಮುಖ್ಯ ಆಯುಕ್ತರಾದ ಡಾ. ಪಿ.ಜಿ.ಆರ್. ಸಿಂಧ್ಯ ಅವರು ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

# ಕಂಪ್ಲಿಯಲ್ಲಿ ತಹಸಿಲ್ದಾರರಿಂದ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಪರಿಶೀಲನೆ

■ ಗಣಿನಾಡವಾಣಿ ವಾರ್ತೆ, ಕಂಪ್ಲಿ



ಚುನಾವಣಾ ಆಯೋಗ ನಡೆಸುತ್ತಿರುವ ಮತದಾರರ ವಿಶೇಷ ಸಮಗ್ರ ಪರಿಶೀಲನೆ ಕಾರ್ಯಕ್ರಮವು ಅತ್ಯಂತ ಮಹತ್ವದ್ದಾಗಿದ್ದು, ಕಂಪ್ಲಿ ಪಟ್ಟಣವೂ ಸೇರಿದಂತೆ ತಾಲ್ಲೂಕಿನಲ್ಲಿ ಮತಗಟ್ಟೆ ಅಧಿಕಾರಿಗಳ ಕಾರ್ಯವನ್ನು ನಿರಂತರವಾಗಿ ಪರಿಶೀಲನೆ ಮಾಡಲಾಗುತ್ತಿದೆ ಹಾಗೂ ಬಿಎಲ್‌ಒಗಳು ಮನೆ ಮನೆಗೆ ತೆರಳಿ ಗಣತಿ ನಮೂನೆಗಳನ್ನು ವಿತರಿಸುತ್ತಿರುವುದನ್ನು ಖಾತ್ರಿ ಪಡಿಸಿಕೊಳ್ಳುತ್ತಿದ್ದೇನೆ ಎಂದು ತಹಸಿಲ್ದಾರರು ಹಾಗೂ ತಾಲ್ಲೂಕಿನ ಸಹಾಯಕ ಮತದಾರರ ನೋಂದಣಾಧಿಕಾರಿ ಜೂಗಲ್ ಮಂಜುನಾಯಕ ತಿಳಿಸಿದರು.

ಪಟ್ಟಣದ ತೆಗ್ಗಿನ ಮಠ ಪ್ರದೇಶದಲ್ಲಿ, ಕೋಟೆ ಪ್ರದೇಶ ಹಾಗೂ ಇತರೆ ಪ್ರದೇಶಗಳಲ್ಲಿ ಮತಗಟ್ಟೆ ಅಧಿಕಾರಿಗಳು ಮನೆ,ಮನೆಗೆ ತೆರಳಿ ಗಣತಿ ನಮೂನೆಗಳನ್ನು ಕೊಡುತ್ತಿರುವುದನ್ನು ಪರಿಶೀಲಿಸಿ ಮಾತನಾಡಿದರು.

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಗಾಗಿ ಬಿಎಲ್ ಒಗಳು ಮನೆ ಮನೆಗೆ ತೆರಳಿ ಗಣತಿ ನಮೂನೆ ಕೊಡುತ್ತಿದ್ದಾರೆ. ನೆಟ್ ವರ್ಕ ಸರ್ವರ್ ತೊಂದರೆ ಮೊದಲಾದ ಸಮಸ್ಯೆಗಳನ್ನು ಗಮನಿಸಲಾಗಿದೆ ಎಂದರು.

ಈಗಾಗಲೇ ಮ್ಯಾಪಿಂಗ್ ಆಗಿದ್ದು, ಗಣತಿ ನಮೂನೆ ವಿತರಿಸಿ ಡಿಜಿಟಲೈಜೇಷನ್ ಮಾಡಲಾಗುತ್ತಿದೆ.

ಮತಗಟ್ಟೆ ಅಧಿಕಾರಿಗಳ ಕಾರ್ಯವೈಖರಿ ಪರಿಶೀಲಿಸಲಾಗುತ್ತಿದೆ. ಎಸ್ ಐ ಆರ್ ಪ್ರಕ್ರಿಯೆಯನ್ನು ಯಾವ ಲೋಒದೋಷಗಳು ಇಲ್ಲದಂತೆ ಸುಸೂತ್ರವಾಗಿ ನೆರವೇರಿಸಲು ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಕಚೇರಿ ಚುನಾವಣಾ ವಿಚಯ ನಿರ್ವಾಹಕ ಎ.ನಿರಂಜನಮೂರ್ತಿ, ಬಿಎಲ್ ಒ ಗಂಗಮ್ಮ, ದ್ವಿತೀಯ ದರ್ಜೆ ಸಹಾಯಕ ಸುರೇಶ್, ಗ್ರಾಮಾಡಳಿತಾಧಿಕಾರಿ ವಮ್ಮಾರಿ ರಮೇಶ್ ಸೇರಿದಂತೆ ಇತರರು ಇದ್ದರು.

## ಅರ್ಜಿ ಆಹ್ವಾನ

■ ಗಣಿನಾಡವಾಣಿ ವಾರ್ತೆ, ಬೆಂಗಳೂರು

ಬೆಂಗಳೂರಿನ ಕೃಷಿ ವಿಶ್ವವಿದ್ಯಾನಿಲಯದ ದೂರ ಶಿಕ್ಷಣ ಘಟಕ, ವಿಸ್ತರಣಾ ನಿರ್ದೇಶನಾಲಯದ ವತಿಯಿಂದ ಕೃಷಿಕರಿಗಾಗಿ ಕೃಷಿಯಲ್ಲಿ ದೂರ ಶಿಕ್ಷಣದ ಮೂಲಕ ನಡೆಸಲಾಗುವ 2026-27ನೇ ಶೈಕ್ಷಣಿಕ ಸಾಲಿನ "ಸಾವಯವ ಮತ್ತು ನೈಸರ್ಗಿಕ ಕೃಷಿ" ಎರಡು ವರ್ಷದ ಡಿಪ್ಲೋಮಾ ಕೋರ್ಸ್‌ಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಎಸ್.ಎಸ್.ಎಲ್.ಸಿ ತೇರ್ಗಡೆ ಅಥವಾ ಅನುತ್ತೀರ್ಣರಾದವರು ಅರ್ಜಿ ಸಲ್ಲಿಸಬಹುದಾಗಿದ್ದು, ಒಟ್ಟು ಕೋರ್ಸ್ ಶುಲ್ಕ ರೂ. 24,000/- ಆಗಿರುತ್ತದೆ. ಶುಲ್ಕ ಆಯಾ ಸೆಮಿಸ್ಟರ್‌ನ ಆರಂಭದಲ್ಲಿ ಪಾವತಿ ಮಾಡಬಹುದು ಅಥವಾ ಪ್ರತಿ ಸೆಮಿಸ್ಟರ್‌ಗೆ ರೂ. 6,000/- ರಂತೆ ಒಟ್ಟು ನಾಲ್ಕು ಬಾರಿ ಪಾವತಿಸಲು ಅವಕಾಶವಿದೆ.

ಆಸಕ್ತ ಅಭ್ಯರ್ಥಿಗಳು 2026 ನೇ ಜುಲೈ 06 ರಿಂದ ಅಗಸ್ಟ್ 07 ರವರೆಗೆ ಅರ್ಜಿ ಶುಲ್ಕ ರೂ. 100/- ಪಾವತಿಸಿ ದೂರ ಶಿಕ್ಷಣ ಘಟಕ, ರೈತ ತರಬೇತಿ ಸಂಸ್ಥೆ, ವಿಸ್ತರಣಾ ನಿರ್ದೇಶನಾಲಯ, ಜಿಕೆವಿಕೆ, ಬೆಂಗಳೂರು-560065 ಇಲ್ಲಿ ಅರ್ಜಿಗಳನ್ನು ಪಡೆಯಬಹುದು. ಅಥವಾ ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಅಧಿಕೃತ ಜಾಲತಾಣ www.uasbangalore.edu.in ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು.

ಭರ್ತಿ ಮಾಡಿದ ಅರ್ಜಿಗಳನ್ನು ನಿಗದಿತ ಕೋರ್ಸ್ ಶುಲ್ಕದ ಡಿ.ಡಿ. (Demand Draft) ಯನ್ನು "COMPTROLLER, UAS, GKVK, BANGALORE-560065" ಇವರ ಹೆಸರಿನಲ್ಲಿ ಪಡೆದು, ದಿನಾಂಕ 07-08-2026 ರ ಸಂಜೆ 4.00 ಗಂಟೆಯ ಒಳಗೆ ಸಂಯೋಜಕರು ಮತ್ತು ಮುಖ್ಯಸ್ಥರು, ದೂರ ಶಿಕ್ಷಣ ಘಟಕ, ರೈತ ತರಬೇತಿ ಸಂಸ್ಥೆ, ವಿಸ್ತರಣಾ ನಿರ್ದೇಶನಾಲಯ, ಕೃಷಿ ವಿಶ್ವವಿದ್ಯಾನಿಲಯ, ಜಿಕೆವಿಕೆ, ಬೆಂಗಳೂರು-560 065 ರವರಿಗೆ ತಲುಪಿಸುವುದು.

ಹೆಚ್ಚಿನ ವಿವರಗಳಿಗಾಗಿ ದೂರವಾಣಿ ಸಂಖ್ಯೆ: 080-23636353 ಅನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

GANINAADA VAANI KANNADA DAILY MORNING OWNER , PUBLISHER, PRINTED BY Editor name : A.K.MALLIKARJUNA: HOUSE NO 84, WARD NO 22, MAHANANDI KOTTAM STREET, TALURU ROAD, AMBEDKARNAGAR, GANDHI NAGAR, BELLARY, KARNATAKA - 583101. Printed at PENNAOBALESHWARA ENTERPRISES#237, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583113.